ಸಂಪುಟ : 10 ಸಂಚಿಕೆ: 107 ಪುಟ : 4+2 ಬೆಲೆ: 3.00 ಗುರುವಾರ ಮೇ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 107 Pages : 4+2 Price : 3.00 Thursday May 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ.29 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ., 22 – ವಿಜಯನಗರ ಶಾಲೆಯ ಭಾಗಗಳು, ಕರುಗಲ್ ಲೇಔಟ್, ಕಮತರ ಪ್ಲಾಟ್, ಶಿಗ್ಗಾವಿ ಪ್ಲಾಟ್, ಟವರ್ ಕಂಬ, ವಾಲ್ಮೀಕಿ ಭವನ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 4 – ಹುಯಿಲಗೋಳ ರಸ್ತೆಯ ಬಲ ಭಾಗದ ಎಲ್ಲಾ ಭಾಗಗಳು, ಮಂಜುನಾಥ್ ನಗರ, 275 ಮನೆ, ಕಣವಿ ಪ್ಲಾಟ್ ಪೂರ್ತಿ ಭಾಗಗಳು. ವಾರ್ಡ್ ನಂ. 27, 28 – ಜಿ ಎಸ್ ಪಾಟೀಲರ ಲೈನ್, ಮಲ್ಲಾಡದರವರ ಲೈನ್, ನಾಗರಕಟ್ಟಿ, ತಂಬ್ರಳ್ಳಿ ಮಠ, ತುಪ್ಪದವರ ಲೈನ್, ಅಪಾರ್ಟ್ಮೆಂಟ್, ಕಟ್ಟಿಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 35 – ಆದರ್ಶ ನಗರ, ದೇವರಾಜ್ ಹಾಸ್ಟೆಲ್, ಪತ್ತಾರ ಸರ್ ಲೈನ್, ನೀಲಮ್ಮತಾಯಿ ಮಠ, ಬನ್ನಿ ಗಿಡದ ಲೈನ್. ವಾರ್ಡ್ ನಂ. 33 – ಗುಜಮಾಗಡಿಯವರ ಲೈನ್, ಪೂಜಾರ ಸರ್ ಲೈನ್, ಆರ ಕೆ ನಗರ ಉಳಿದ ಕೆಲವು ಭಾಗಗಳು.

ಪ್ರಕಟಣೆ: ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಐದು ವರ್ಷಗಳಿಂದ ಪ್ರತಿಭಾವಂತ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿರುವ ಮಲ್ಲಸಮುದ್ರ ಗ್ರಾಮದ ರಾಮರಾವ ನಾರಪ್ಪನವರ ಮತ್ತು ಕೊಪ್ಪಳದ ಕೃಷ್ಣರಾವ ಕುಲಕರ್ಣಿ ಕುಟುಂಬದ ಕೃಷ್ಣ ಸೇವಾ ಕೇಂದ್ರ ಟ್ರಸ್ಟ್ ಎಸ್ಎಸ್ಎಲ್ಸಿ, ದ್ವಿತೀಯ ಪಿಯುಸಿ ಪರಿಕ್ಷೆಯಲ್ಲಿ ಹೆಚ್ಚು ಅಂಕ ಪಡೆದು ಪಾಸಾಗಿರುವ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಭಾವಂತ ಮತ್ತು ವಾರ್ಷಿಕವಾಗಿ ಕುಟುಂಬದ ವರಮಾನ ಐದು ಲಕ್ಷ ರೂಪಾಯಿಗಳಿಗಿಂತ ಕಡಿಮೆಯಿರುವ, ಆರ್ಥಿಕವಾಗಿ ದುರ್ಬಲವಾಗಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಜೂನ್ 20ರೊಳಗೆ https://tinyurl.com/kskApply ವಿಳಾಸಕ್ಕೆ ಕಳಿಸಬೇಕು. ವಿವರಗಳಿಗೆ 9916186586, 6362027343, 9916622689 ಸಂಖ್ಯೆಗೆ ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿಶೇಷಚೇತನರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಿದ ಶಾಸಕ ಜಿ.ಎಸ್. ಪಾಟೀಲ

# ಬೆಳೆ ಸಂರಕ್ಷಣೆಗೆ ಕೋಲ್ಡ್ ಸ್ಟೋರೇಜ್ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕು ಹೆಚ್ಚಿನ ರೈತರನ್ನು ಹೊಂದಿದ್ದು, ಈ ದಿಶೆಯಲ್ಲಿ 10 ಕೋಟಿ ರೂಗಳ ವೆಚ್ಚದಲ್ಲಿ ಕೋಲ್ಡ್ ಸ್ಟೋರೇಜ್ ಕಟ್ಟಡ ನಿರ್ಮಾಣಕ್ಕೆ ಶೀಘ್ರ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿಶೇಷಚೇತನರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಿ ಮಾತನಾಡಿದರು.

ರೈತರು ಬೆಳೆದ ಬೆಳೆಗಳನ್ನು ಸಂರಕ್ಷಣೆ ಮಾಡಲು ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಅಣಿಯಾಗಿದ್ದು, ರೋಣ ಪಟ್ಟಣದ ಸೂಡಿ ಕ್ರಾಸ್‌ನಿಂದ ಶಿವಾನಂದ ಮಠದವರೆಗೆ 3 ಕೋಟಿ 50 ಲಕ್ಷ ರೂ ವೆಚ್ಚದಲ್ಲಿ ಡಬಲ್ ಸಿಸಿ ರಸ್ತೆ, ಪಾದಚಾರಿ ರಸ್ತೆ ಸೇರಿ ಅಲಂಕಾರಿಕ ವಿದ್ಯುತ್ ದೀಪಗಳ ಅಳವಡಿಕೆ ಕಾರ್ಯಕ್ಕೆ ಚಾಲನೆ ನೀಡಲಾಗುವುದು. ಪಟ್ಟಣದ ಜನತೆ ಅಭಿವೃದ್ಧಿಯ ದೃಷ್ಟಿಯಿಂದ ಸಹಕರಿಸಬೇಕು ಎಂದರು.



2 ಕೋಟಿ ರೂಗಳ ವೆಚ್ಚದಲ್ಲಿ ಸರಕಾರಿ ಪಿಯು ಕಾಲೇಜು ಕಟ್ಟಡ ನಿರ್ಮಾಣ ಪ್ರಗತಿಯಲ್ಲಿದೆ. ಶೀಘ್ರವೇ ಕಟ್ಟಡ ಉದ್ಘಾಟನೆ ನೆರವೇರಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಗುವುದು. ಮುಖ್ಯವಾಗಿ ಪಟ್ಟಣದ ಹೃದಯ ಭಾಗದಲ್ಲಿರುವ ಕೆರೆಯ ಸೌಂದರ್ಯ ಹೆಚ್ಚಿಸಲು ಹೆಚ್ಚಿನ ಒತ್ತು ನೀಡಿ ಅನುದಾನವನ್ನು ಸಹ ಬಳಕೆ ಮಾಡಿದೆ. ವಿಪರ್ಯಾಸವೆಂದರೆ, ಜನರು ಅದರ ಸದ್ಬಳಕೆಗೆ ಮುಂದಾಗುತ್ತಿಲ್ಲ. ಇದರಿಂದ ತೀವ್ರ ಬೇಸರವಾಗಿದ್ದು, ಈ ಬಗ್ಗೆ ಕಠಿಣ ನಿರ್ಧಾರ ತೆಗೆದುಕೊಳ್ಳುವುದು ಅವಶ್ಯಕವಾಗಿದೆ ಎಂದರು. ವಿಶೇಷಚೇತನರ ಬಗ್ಗೆ ಬಾಯಿ ಮಾತಿನಿಂದ ಅನುಕಂಪ ತೇ-ೂರಿದರೆ ಸಾಲದು. ಹೀಗಾಗಿ, ಶಾಸಕರ ಅನುದಾನದಲ್ಲಿ ಈ ಮೊದಲು 18 ಮತ್ತು ಈಗ ನಾಲ್ಕು ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ. ಇನ್ನು 8 ತ್ರಿಚಕ್ರ ವಾಹನಗಳಿಗೆ ಅನುದಾನ ಒದಗಿಸಲಾಗಿದ್ದು, ಅವುಗಳನ್ನು ಸಹ ವಿತರಿಸಲಾಗುವುದು. ಅಲ್ಲದೆ ವಿಶೇಷಚೇತನರು ವಾಹನಗಳ ಸೌಲಭ್ಯ ಪಡೆದು ನೆಮ್ಮದಿಯ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ಮುತ್ತಣ್ಣ ಸಂಗಳದ, ಯೂಸುಪ್ ಇಟಗಿ, ಬಸವರಾಜ ಜಗ್ಗಲ, ಪ್ರಕಾಶ ಹಾಲಣ್ಣವರ ಸೇರಿದಂತೆ ಪುರಸಭೆಯ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

> ಪಟ್ಟಣದ ಹೃದಯ ಭಾಗದಲ್ಲಿರುವ ಕೆರೆಯ ಸೌಂದರ್ಯವನ್ನು ಹೆಚ್ಚಿಸಿ ಅದನ್ನು ಸಾರ್ವಜನಿಕರ ಉಪಯೋಗಕ್ಕೆ ನೀಡಬೇಕು ಎನ್ನುವುದು ನನ್ನ ಮೊದಲ ಆದ್ಯತೆಯಾಗಿದೆ. ಕೆರೆಯ ಅಭಿವೃದ್ಧಿ ಕಾರ್ಯ ಮುಗಿಯುವ ತನಕ ಎರಡೂ ಬದಿಯಲ್ಲಿ ಗೇಟ್ ಅಳವಡಿಸಿ ಸಂಚಾರ ನಿಷೇಧಿಸಲು ಕ್ರಮ ಕೈಗೊಳ್ಳಲಾಗಿದೆ. ಇದಕ್ಕೆ ಪಟ್ಟಣದ ಜನತೆ ಸಂಪೂರ್ಣ ಸಹಕಾರ ನಿಡಬೇಕು.
>
> – ಜಿ.ಎಸ್. ಪಾಟೀಲ.
> ಶಾಸಕರ, ರೋಣ.

### ನವಲಗುಂದದ ಯಮನೂರು ಗ್ರಾಮದ ಸೇತುವೆ ಹತ್ತಿರ ಬೆಣ್ಣೆಹಳ್ಳದ ನಾಲೆಯನ್ನು ವೀಕ್ಷಿಸಿದ ಸಚಿವ ಸಂತೋಷ್ ಲಾಡ್

# ಪ್ರವಾಹ ನಿಯಂತ್ರಣಕ್ಕೆ ಶಾಶ್ವತ ಪರಿಹಾರ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ ಎರಡು ಪ್ರಮುಖ ಹಳ್ಳಗಳಾದ ಬೆಣ್ಣೆಹಳ್ಳ ಮತ್ತು ತುಪ್ಪರಿಹಳ್ಳದ ಪ್ರವಾಹ ನಿಯಂತ್ರಣ ಹಾಗೂ ನೀರಿನ ಸದ್ಬಳಕೆಗೆ ಅಗತ್ಯ ಯೋಜನೆ ಸಿದ್ಧಗೊಳಿಸಿದ್ದು, ಶಾಶ್ವತ ಪರಿಹಾರ ಕ್ರಮಕೈಗೊಳ್ಳಲು ಆರಂಭಿಕವಾಗಿ ರೂ. 200 ಕೋಟಿ ಹಣ ಸರ್ಕಾರದಿಂದ ಈಗಾಗಲೇ ಬಿಡುಗಡೆ ಆಗಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದರು.

ಅವರು ಬುಧವಾರ ಮಧ್ಯಾಹ್ನ ನವಲಗುಂದ ತಾಲೂಕಿನ ಯಮನೂರು ಗ್ರಾಮದ ಸೇತುವೆ ಹತ್ತಿರ ಬೆಣ್ಣೆಹಳ್ಳದ ನಾಲೆಯನ್ನು ವೀಕ್ಷಿಸಿ ಮಾತನಾಡಿದರು.

ಬೆಣ್ಣೆಹಳ್ಳದಿಂದ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ 6 ತಾಲೂಕುಗಳ 56 ಹಳ್ಳಿಗಳು ಬಾಧಿತವಾಗುತ್ತವೆ. ಬೆಣ್ಣೆಹಳ್ಳವು ಈ ಮೂರು ಜಿಲ್ಲೆಗಳ 148 ಕಿ.ಮೀ ಉದ್ದದಲ್ಲಿ ಹರಿಯುತ್ತದೆ. ಇದು ಸುಮಾರು 4800 ಚದರ ಕಿ.ಮೀ ಜಲಾನಯನ ಪ್ರದೇಶವನ್ನು ಹೊಂದಿದೆ. 2012ರಲ್ಲಿ ನೀರಾವರಿ ತಜ್ಞ ಡಾ. ಜಿ.ಎಸ್. ಪರಮಶಿವಯ್ಯ ಅವರು ತುಪ್ಪರಿಹಳ್ಳ ಮತ್ತು ಬೆಣ್ಣೆಹಳ್ಳದ ಪ್ರವಾಹ ನಿಯಂತ್ರಣ ಹಾಗೂ ನೀರಿನ ಸದ್ಬಳಕೆ ಕುರಿತು ನೀಡಿದ ಅಧ್ಯಯನ ವರದಿಯನ್ನು ಸರಕಾರ ಪರಿಶೀಲಿಸಿದೆ. ಅದರ ಆಧಾರದ ಮೇಲೆ ನೀರಾವರಿ ನಿಗಮದ ವರದಿ ಪಡೆದು ಅನುಷ್ಠಾನಗೊಳಿಸುತ್ತದೆ ಎಂದು ಸಚಿವರು ಹೇಳಿದರು.



ಸ್ಥಳೀಯ ಶಾಸಕ ಎನ್.ಎಚ್. ಕೋನರಡ್ಡಿ ಅವರ ನಿರಂತರ ಪ್ರಯತ್ನ ಹಾಗೂ ಒತ್ತಾಯದ ಫಲವಾಗಿ ಮುಖ್ಯಮಂತ್ರಿಗಳು 2024–25ನೇ ಸಾಲಿನ ಆಯವ್ಯಯದಲ್ಲಿ ರೂ. 200 ಕೋಟಿಗಳ ಅನುದಾನ ನೀಡಿ, ಹಣ ಬಿಡುಗಡೆ ಮಾಡಿದ್ದಾರೆ. ಕಾಮಗಾರಿಗೆ ಟೆಂಡರ್ ಕರೆಯಲಾಗಿದ್ದು, ಅಂತಿಮ ಹಂತದಲ್ಲಿದೆ. ಮಳೆಗಾಲ ಮುಗಿದ ನಂತರ ಕಾಮಗಾರಿ ಪ್ರಾರಂಭಿಸಲಾಗುತ್ತದೆ ಎಂದು ಸಚಿವ ಸಂತೋಷ ಲಾಡ್ ತಿಳಿಸಿದರು.

ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ಧಾರವಾಡ ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆಯು ನೀಡಿದ್ದು, ಇದಕ್ಕಾಗಿ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಪ್ರತಿ ಜಿಲ್ಲೆಯಲ್ಲಿರುವ ಉಸ್ತುವಾರಿ ಸಚಿವರು ಮತ್ತು ಶಾಸಕರು, ಜಿಲ್ಲಾಧಿಕಾರಿಯವರು ಜಿಲ್ಲೆಯಲ್ಲಿ ಬರುವ ಪ್ರತಿಯೊಂದು ಪ್ರವಾಹ ಪೀಡಿತ ಪ್ರದೇಶಗಳನ್ನು ಮತ್ತು ಹಳ್ಳಗಳನ್ನು ಪರೀಕ್ಷಿಸಿ, ವರದಿ ಸಲ್ಲಿಸಬೇಕೆಂದು ಹೇಳಿದ್ದಾರೆ. ಅದರಂತೆ ನಮ್ಮ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಬೆಣ್ಣೆಹಳ್ಳ ಹಾಗೂ ತುಪ್ಪರಿಹಳ್ಳದ ಪ್ರವಾಹ ಪೀಡಿತವಾಗಬಹುದಾದ ಪ್ರದೇಶಗಳಿಗೆ ಇಂದು ಭೇಟಿ ನೀಡಿದ್ದಾರೆ. ನವಲಗುಂದ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಪ್ರವಾಹ ಪೀಡತ ಪ್ರದೇಶಗಳನ್ನು ತೋರಿಸಿ, ವಿವರಿಸಲಾಗಿದೆ ಎಂದು ಹೇಳಿದರು.

►►3ನೇ ಪುಟಕ್ಕೆ

#### ವಿಪತ್ತು ನಿರ್ವಹಣೆಗೆ ಅಗತ್ಯ ನೆರವು

ಜಿಲ್ಲೆಯಲ್ಲಿ ಮುಂದಿನ ಮೂರು ತಿಂಗಳ ಮಳೆಗಾಲದಲ್ಲಿ ಉಂಟಾಗುವ ಹಳ್ಳಗಳ ಪ್ರವಾಹ, ಅತಿವೃಷ್ಟಿ ಸಮಸ್ಯೆಗಳನ್ನು ಸಮರ್ಪಕವಾಗಿ ಎದುರಿಸಿ, ಯಾವುದೇ ಜನ-ಜಾನುವಾರು ಹಾನಿ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈಗಾಗಲೇ ಜಿಲ್ಲಾಮಟ್ಟದಲ್ಲಿ ಸಭೆ ಜರುಗಿಸಿ, ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕೇಂದ್ರ ಸ್ಥಾನ ಬಿಡದಂತೆ ಮತ್ತು ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಕಾಳಜಿ ತೇ-ೂರದಂತೆ ನಿರ್ದೇಶಿಸಿ, ಎಚ್ಚರಿಕೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

# ಕೋವಿಡ್ ಬಗ್ಗೆ ಎಚ್ಚರಿಕೆಯಿರಲಿ



■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯದಲ್ಲಿ ಮತ್ತೆ ಕೋವಿಡ್ ಸೋಂಕು ಆರಂಭವಾಗಿದ್ದು, ನಾಗರಿಕರು ಕೋವಿಡ್ ಬಗ್ಗೆ ಭಯ ಪಡದೆ ಎಚ್ಚರಿಕೆಯಿಂದ ಇರಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡುತ್ತಿದ್ದರು.

ಈ ಹಿಂದೆ ಕೊರೋನಾ ರೋಗ ಹರಡಿದ್ದ ಸಂದರ್ಭದಲ್ಲಿ ಇಡೀ ವಿಶ್ವವೇ ಅಲ್ಲೋಲಕಲ್ಲೋಲವಾಗಿದ್ದನ್ನು ನಾವು ಮರೆಯುವಂತಿಲ್ಲ. ಅಲ್ಲದೆ ಲಾಕ್‌ಡೌನ್ ಸಹ ನಡೆದಿತ್ತು. ಈಗ ರಾಜ್ಯ ಸೇರಿದಂತೆ ದೇಶದ ನಾಗರಿಕರಿಗೆ ಅಲ್ಲಲ್ಲಿ ರೋಗದ ಲಕ್ಷಣಗಳು ಕಂಡುಬರುತ್ತಿದ್ದು, ಸಾರ್ವಜನಿಕರು ಎಚ್ಚರಿಕೆಯಿಂದ ಇದ್ದು ಕೊವಿಡ್‌ನ್ನು ಇನ್ನಿಲ್ಲದಂತೆ ಮಾಡಬೇಕು ಎಂದರು.

ಈಗಾಗಲೇ ಅಧಿಕಾರಿಗಳಿಗೆ, ವೈದ್ಯರುಗಳಿಗೆ ಸೂಚನೆ ನೀಡಲಾಗಿದೆ. ಸರಕಾರಿ ಆಸ್ಪತ್ರೆಗಳಲ್ಲಿ ಔಷಧಿ ಸೇರಿ ಅಗತ್ಯ ಸಲಕರಣೆಗಳ ಬಗ್ಗೆ ಮುಂಜಾಗೃತಾ ಕ್ರಮ ತೆಗೆದುಕೊಳ್ಳಲು ತಿಳಿಸಿದ್ದು, ಶಹರ ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಒತ್ತು ನೀಡಬೇಕು. ತಾಲೂಕು ಮಟ್ಟದ ಅಧಿಕಾರಿಗಳು ಸ್ವಚ್ಛತೆಯ ವಿಷಯದಲ್ಲಿ ಹೆಚ್ಚಿನ ಮುತುವರ್ಜಿ ತೆಗೆದುಕೊಳ್ಳಬೇಕು ಎಂದರು.

ಪುರಸಭೆ ಸದಸ್ಯರು ತಮ್ಮ ವಾರ್ಡ್‌ಗಳಲ್ಲಿ ಜನರಿಗೆ ತಿಳುವಳಿಕೆ ನಿಡಬೇಕು. ಈಗ ಮಳೆಗಾಲ ಆರಂಭವಾಗಿದ್ದು, ಅಲ್ಲಲ್ಲಿ ನೀರು ನಿಂತು ಗಲೀಜು ಆದರೆ ಸೊಳ್ಳೆಗಳ ಉತ್ಪತ್ತಿ ಜಾಸ್ತಿಯಾಗುತ್ತದೆ. ಇದರಿಂದ ಹಲವು ರೋಗಗಳೂ ಬರುತ್ತವೆ. ಹಿಗಾಗಿ ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಅಧಿಕಾರಿಗಳಿಗೆ, ವೈದ್ಯಕೀಯ ಸಿಬ್ಬಂದಿಗಳಿಗೆ ಸಹಕರಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಪುರಸಭೆಯ ಸದಸ್ಯರು ಉಪಪಸ್ಥಿತರಿದ್ದರು.

# ಕೊರೋನಾ ಆತಂಕ: ಹೆಮ್ಮಾರಿ ಎದುರಿಸಲು ಸಜ್ಜಾದ ಜಿಮ್ಸ್..!

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸೇರಿ ದೇಶದಲ್ಲಿ ಮತ್ತೆ ಮಹಾಮಾರಿ ಕೊರೋನಾ ಆತಂಕ ಮನೆ ಮಾಡಿದೆ. ಅದರಲ್ಲೂ ಕರ್ನಾಟಕದ ಸಿಲಿಕಾನ್ ಸಿಟಿ ಬೆಂಗಳೂರು ಸೇರಿ ಹಲವು ಜಿಲ್ಲೆಗಳಲ್ಲಿ ದಿನಕ್ಕೊಂದು ಕೇಸ್ ವರದಿ ಆಗುತ್ತಲೇ ಇದ್ದು, ಜನತೆಯನ್ನು ಆತಂಕಕ್ಕೆ ದೂಡಿದೆ.



ಅದರಂತೆ ಗದಗ ಜಿಲ್ಲೆಯಲ್ಲೂ ಜಿಮ್ಸ್ ಆಸ್ಪತ್ರೆಯಲ್ಲಿ ವಿಶೇಷ ಕೋವಿಡ್ ಐಸೋಲೇಷನ್ ವಾರ್ಡ್ ಆರಂಭಿಸಲಾಗಿದೆ. ಈ ಮೂಲಕ ಹೆಮ್ಮಾರಿ ಎದುರಿಸಲು ಜಿಮ್ಸ್ ಆಡಳಿತ ಮಂಡಳಿ ಸಜ್ಜಾಗಿದೆ. ಈಗಾಗಲೇ ಮುಂಜಾಗ್ರತಾ ಕ್ರಮವಾಗಿ ಕೊರೋನಾ ವಾರ್ಡ್ ತೆರೆಯಲಾಗಿದ್ದು, ಆಕ್ಸಿಜನ್ ಹಾಗೂ ವೆಂಟಿಲೇಟರ್ ವ್ಯವಸ್ಥೆಯುಳ್ಳ 10 ಬೆಡ್ ಗಳ ವಾರ್ಡ್ ತೆರೆಯಲಾಗಿದೆ. ಕೊರೋನಾ ಚಿಕಿತ್ಸೆಗೆ ಬೇಕಾಗುವ ಎಲ್ಲಾ ರೀತಿಯ ಔಷಧಿಗಳ ವ್ಯವಸ್ಥೆ ಮಾಡಲಾಗಿದೆ. ವಯಸ್ಸಾದ, ಗರ್ಭಿಣಿಯರು, ಮಕ್ಕಳ ಮೇಲೆ ವಿಶೇಷ ನಿಗಾ ಇಡಲಾಗಿದೆ. ಸೋಂಕು ಉಲ್ಬಣಿಸಿದ್ರೆ ಪ್ರತ್ಯೇಕ ವಾರ್ಡ್‌ನಲ್ಲಿಯೇ ಚಿಕಿತ್ಸೆ ನೀಡಲು ಜಿಮ್ಸ್ ಸಜ್ಜಾಗಿದೆ.



ಸಧ್ಯ ಕೊರೋನಾ ಗುಣಲಕ್ಷಣ ಹೊಂದಿದವರನ್ನ ಮಾತ್ರ ಟೆಸ್ಟಿಂಗ್ ಮಾಡಲಾಗುತ್ತಿದ್ದು, ಟೆಸ್ಟಿಂಗ್ ನಲ್ಲಿ ಪಾಸಿಟಿವ್ ಬಂದ್ರೆ ಕೊರೋನಾ ವಾರ್ಡ್ ನಲ್ಲಿ ಚಿಕಿತ್ಸೆ ನೀಡಲಾಗುತ್ತದೆ. ಗದಗ ಜಿಮ್ಸ್ ನಲ್ಲಿ ಆಕ್ಸಿಜನ್ ಸೌಲಭ್ಯಯುಳ್ಳ 750 ಬೆಡ್ ಗಳ ವ್ಯವಸ್ಥೆ ಇದೆ ಎಂದು ಕೋವಿಡ್ ನೋಡಲ್ ಅಧಿಕಾರಿ ಡಾ. ಜಿ ಎಂ ಪಲ್ಲೇದ ಮಾಧ್ಯಮಗಳಿಗೆ ಹೇಳಿಕೆ ಕೊಟ್ಟಿದ್ದಾರೆ.

## ಸಂಪಾದಕೀಯ

# ಕನ್ನಡ: ಒಂದು ಸ್ವತಂತ್ರ ಮತ್ತು ಇತಿಹಾಸವುಳ್ಳ ಭಾಷೆ

ತಮಿಳಿನಂತೆ ಕನ್ನಡವೂ ಒಂದು ಸ್ವತಂತ್ರ ಹಾಗೂ ದೀರ್ಘಕಾಲದ ಇತಿಹಾಸವಿರುವ ಭಾಷೆ ಎಂಬುದು ಸ್ಪಷ್ಟ. ಈ ಸತ್ಯವನ್ನು ಅರಿತುಕೊಳ್ಳದ ಕೆಲವು ಹೇಳಿಕೆಗಳು ಇತ್ತೀಚೆಗೆ ಕನ್ನಡಿಗರ ಕೆಂಗಣ್ಣಿಗೆ ಗುರಿಯಾಗಿವೆ.

ಪ್ರಮುಖವಾಗಿ, ಖ್ಯಾತ ನಟ ಕಮಲ್ ಹಾಸನ್ ಅವರು ಕನ್ನಡ ಬೇರೆ ಭಾಷೆಯಿಂದ ಹುಟ್ಟಿದೆ ಎಂಬರ್ಥದ ಹೇಳಿಕೆ ನೀಡಿದಾಗ, ಕನ್ನಡಿಗರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈ ಹೇಳಿಕೆಯನ್ನು ಕರ್ನಾಟಕದ ಹಲವು ರಾಜಕಾರಣಿಗಳು ಖಂಡಿಸಿದ್ದು, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ಕಮಲ್ ಹಾಸನ್ ಅವರ ಹೇಳಿಕೆಗೆ ವಿರೋಧ ವ್ಯಕ್ತಪಡಿಸಿ, ಕನ್ನಡ ಭಾಷೆಗೆ ಬಹಳ ದೀರ್ಘಕಾಲದ ಇತಿಹಾಸ ಇದೆ. ಪಾಪ ಅವರಿಗೆ ಗೊತ್ತಿಲ್ಲ ಅಂತ ಕಾಣುತ್ತೆ ಎಂದು ಒಂದೇ ಸಾಲಿನಲ್ಲಿ ಪ್ರತ್ಯುತ್ತರ ಕೊಟ್ಟಿದ್ದಾರೆ. ಕನ್ನಡ ಭಾಷೆಯು ದ್ರಾವಿಡ ಭಾಷಾ ಕುಟುಂಬಕ್ಕೆ ಸೇರಿದ್ದರೂ, ಅದು ತನ್ನದೇ ಆದ ಅನನ್ಯತೆ ಮತ್ತು ಸ್ವತಂತ್ರ ಬೆಳವಣಿಗೆಯನ್ನು ಹೊಂದಿದೆ. ಕ್ರಿ.ಶ. 450ರ ಹಲ್ಮಿಡಿ ಶಾಸನವು ಕನ್ನಡದ ಅತ್ಯಂತ ಪ್ರಾಚೀನ ಲಿಖಿತ ದಾಖಲೆಗಳಲ್ಲಿ ಒಂದಾಗಿದೆ. ಅದಕ್ಕೂ ಮುನ್ನ, ಪ್ರಕೃತಿ ಭಾಷೆಯಲ್ಲಿನ ಶಾಸನಗಳಲ್ಲಿ ಕನ್ನಡದ ಕೆಲವು ಪದಗಳು ಕಂಡುಬಂದಿವೆ ಎಂಬುದು ಭಾಷಾಶಾಸ್ತ್ರಜ್ಞರ ಅಭಿಪ್ರಾಯ. ಕ್ರಿ.ಶ. 850ರಲ್ಲಿ ರಚಿತವಾದ 'ಕವಿರಾಜಮಾರ್ಗ'ವು ಕನ್ನಡದ ಪ್ರಪ್ರಥಮ ಉಪಲಬ್ಧ ಸಾಹಿತ್ಯ ಕೃತಿಯಾಗಿದ್ದು, ಇದು ಕನ್ನಡ ಸಾಹಿತ್ಯದ ಶ್ರೀಮಂತ ಪರಂಪರೆಗೆ ಸಾಕ್ಷಿಯಾಗಿದೆ.

ಕನ್ನಡ ಭಾಷೆಯು ಸಾವಿರಾರು ವರ್ಷಗಳ ಇತಿಹಾಸವನ್ನು ಹೊಂದಿದ್ದು, ತನ್ನದೇ ಆದ ವ್ಯಾಕರಣ, ಶಬ್ದಕೋಶ ಮತ್ತು ಸಾಹಿತ್ಯ ಪರಂಪರೆಯನ್ನು ಬೆಳೆಸಿಕೊಂಡಿದೆ. ಪ್ರಾಚೀನ ಕನ್ನಡ ಸಾಹಿತ್ಯವು ಪಂಪ, ರನ್ನ, ಪೊನ್ನ ಮುಂತಾದ ಮಹಾಕವಿಗಳಿಂದ ಸಮೃದ್ಧವಾಗಿದೆ. ಮಧ್ಯಕಾಲೀನ ಮತ್ತು ಆಧುನಿಕ ಕನ್ನಡ ಸಾಹಿತ್ಯವು ಕೂಡ ಅನೇಕ ಮಹಾನ್ ಲೇಖಕರನ್ನು ಕಂಡಿದೆ ಮತ್ತು ವಿವಿಧ ಪ್ರಕಾರಗಳಲ್ಲಿ ಅಪಾರ ಕೊಡುಗೆ ನೀಡಿದೆ. ಕನ್ನಡಕ್ಕೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಲಭಿಸಿರುವುದು, ಕನ್ನಡ ಸಾಹಿತ್ಯದ ಗುಣಮಟ್ಟ ಮತ್ತು ಹಿರಿಮೆಗೆ ಸಾಕ್ಷಿಯಾಗಿದೆ.

ಯಾವುದೇ ಭಾಷೆಯು ಸಂಪೂರ್ಣವಾಗಿ ಪ್ರತ್ಯೇಕವಾಗಿ ಅಸ್ತಿತ್ವದಲ್ಲಿಲ್ಲ. ಭಾಷೆಗಳು ಪರಸ್ಪರ ಪ್ರಭಾವ ಬೀರುವುದು ಸಹಜ. ಆದರೆ, ಕನ್ನಡವು ಯಾವುದೇ ಒಂದು ನಿರ್ದಿಷ್ಟ ಭಾಷೆಯಿಂದ ಹುಟ್ಟಿಕೊಂಡಿಲ್ಲ ಎಂಬುದು ಸತ್ಯ. ಇದು ತನ್ನದೇ ಆದ ಮೂಲಗಳನ್ನು ಹೊಂದಿದ್ದು, ಕಾಲಾನುಕ್ರಮದಲ್ಲಿ ತನ್ನದೇ ಆದ ವಿಶಿಷ್ಟ ಸ್ವರೂಪವನ್ನು ಪಡೆದುಕೊಂಡಿದೆ.

ಕನ್ನಡ ಭಾಷೆ ಕೇವಲ ಸಂವಹನ ಮಾಧ್ಯಮವಲ್ಲ, ಅದು ಕನ್ನಡಿಗರ ಸಂಸ್ಕೃತಿ, ಇತಿಹಾಸ ಮತ್ತು ಅಸ್ಮಿತೆಯ ಪ್ರತಿಬಿಂಬವಾಗಿದೆ. ಈ ಸತ್ಯವನ್ನು ಪ್ರತಿಯೊಬ್ಬರೂ ಅರಿತುಕೊಳ್ಳುವುದು ಅತ್ಯಗತ್ಯ.

---

### ವರ್ಷಕ್ಕೊಂದಾದರೂ ಗಿಡ ನೆಡುವ ಮೂಲಕ ಪರಿಸರ ಉಳಿಸೋಣ

# ಬನ್ನಿ, ಗಿಡ ನೆಡೋಣ!



ಪ್ರಕೃತಿಯ ಕರುಣೆ ಮತ್ತೆ ಆಕಾಶದಿಂದ ಸುರಿಯುತ್ತಿದೆ. ಮೊಟ್ಟಮೊದಲ ಮಳೆಯ ಹನಿಗಳು ನೆಲದ ಮಡಿಲು ಹಾಸುಹೊಕ್ಕು ಆನಂದದಿಂದ ಕುಣಿಯುವಂತೆ ಮಾಡುತ್ತವೆ. ನೀರಿನ ಹನಿಗಳಿಂದ ಮರಗಳು ನವಚೈತನ್ಯವನ್ನು ಅನುಭವಿಸುತ್ತವೆ. ಹಕ್ಕಿಗಳು ಹರ್ಷದಿಂದ ಚಿಲಿಪಿಲಿ ಹಾಡು ಹಾಡುತ್ತವೆ, ಬೆಳೆಗಳು ಜೀವೋದ್ಧಾರದಂತೆ ಮೊಳಕು ಇಡುತ್ತವೆ. ಹೀಗೆ ಮಳೆ ಎಂದರೆ ಕೇವಲ ನೀರಿನ ಸುರಿವಷ್ಟೇ ಅಲ್ಲ, ಅದು ಬದುಕಿಗೆ ಶಕ್ತಿ ನೀಡುವ ದೇವತಾ ವರ.

ಈ ತಾಜಾ ಮಳೆಯ ಹನಿಗಳ ನಡುವೆ ನಾವು ನಮ್ಮ ಜವಾಬ್ದಾರಿಯನ್ನು ಮರೆತೆವೇನೋ ಎಂಬ ಭಾವನೆ ಮೂಡುತ್ತದೆ. ನಾವು ಪರಿಸರವನ್ನು ಹಾಳು ಮಾಡುತ್ತಾ ಬಂದಿದ್ದೇವೆ, ಇಂದಿನ ಜೀವನಶೈಲಿ, ನಗರೀಕರಣ, ಅರಣ್ಯ ನಾಶ, ಇವುಗಳೆಲ್ಲವೂ ಪ್ರಕೃತಿಗೆ ನೀಡಿದ ಗಾಯಗಳೇ. ಆದರೆ ನಾವು ಇದನ್ನು ನಿಲ್ಲಿಸಬಹುದಾದ ಹಂತದಲ್ಲಿದ್ದೇವೆ. ನಾವೆಲ್ಲರೂ ಕೈಜೋಡಿಸಿ ಪರಿಸರವನ್ನು ಉಳಿಸುವ ನಿಟ್ಟಿನಲ್ಲಿ ಸಣ್ಣ ಹೆಜ್ಜೆ ಇಟ್ಟರೆ ಅದು ಭವಿಷ್ಯದಲ್ಲಿ ದೊಡ್ಡ ಬದಲಾವಣೆಗೆ ಕಾರಣವಾಗಬಹುದು. ಅದರಲ್ಲಿ ಅತ್ಯಂತ ಸರಳ, ಪರಿಣಾಮಕಾರಿ ಹಾಗೂ ಶಾಶ್ವತ ಮಾರ್ಗವೆಂದರೆ ಗಿಡ ನೆಡುವುದು.

ಒಂದು ಗಿಡ ನೆಡುವುದರಿಂದ ನಾವು ಕೇವಲ ಪ್ರಪಂಚದ ಪರಿಸರ ಸಮಸ್ಯೆಗೆ ಪರಿಹಾರ ನೀಡುತ್ತಿರುವುದಿಲ್ಲ, ಬದಲಾಗಿ ಭವಿಷ್ಯದ ಪೀಳಿಗೆಗೆ ಜೀವ ನೀಡುತ್ತಿದ್ದೇವೆ. ಗಿಡಗಳು ವಾತಾವರಣದ ಕಾರ್ಬನ್ ಡೈಆಕ್ಸೈಡ್ ಅನ್ನು ತೆಗೆದು-ಕೊಂಡು ಆಮ್ಲಜನಕವನ್ನು ಬಿಡುಗಡೆ ಮಾಡುತ್ತವೆ. ಇದು ಶುದ್ಧ ವಾಯುವಿನ ಹೆಚ್ಚಳಕ್ಕೆ ಸಹಾಯ ಮಾಡುತ್ತದೆ. ಮಳೆ ನೀರನ್ನು ಇಂಗಿಸಿ ನೆಲದ ನದಿ-ಬಾವಿಗಳ ಶುದ್ಧೀಕರಣಕ್ಕೂ ಸಹಕಾರಿ. ಮಣ್ಣಿನ ಇಂಧನ ಶಕ್ತಿ ಹೆಚ್ಚಿಸಲು, ಕಳಪೆ ಭೂಮಿಯನ್ನು ಪರಿವರ್ತಿಸುವಲ್ಲಿಯೂ ಗಿಡಗಳ ಪಾತ್ರ ಅಪಾರ.

ಮಳೆಗಾಲವು ಗಿಡ ನೆಡುವ ಅತ್ಯುತ್ತಮ ಸಮಯ. ಮಳೆಯ ತಂಪು, ಮಣ್ಣು ತೇವದಿಂದ ಕೂಡಿರುವುದು ಬೀಜಗಳ ಮೊಳೆಯುವಿಕೆಗೆ ಸಹಾಯಕವಾಗುತ್ತದೆ. ನೆಟ್ಟ ಗಿಡಗಳು ಸುಲಭವಾಗಿ ನೆಲದೊಂದಿಗೆ ಬೇರೂರಿ ಬೆಳೆದು ಪರಿಪೂರ್ಣ ಮರಗಳಾಗಿ ಪರಿವರ್ತನೆಗೊಳ್ಳುತ್ತವೆ.

ಪರಿಸರ ರಕ್ಷಣೆ ಎಂಬುದು ಕೇವಲ ಸರ್ಕಾರದ ಹೊಣೆಗಾರಿಕೆ ಅಲ್ಲ. ಪ್ರತಿಯೊಬ್ಬ ನಾಗರಿಕನೂ ತಮ್ಮ ಜವಾಬ್ದಾರಿಯನ್ನು ಗುರುತಿಸಬೇಕು. ಶಾಲಾ ಮಕ್ಕಳಿಂದ ಆರಂಭಿಸಿ ಹಿರಿಯ ನಾಗರಿಕರವರೆಗೆ ಎಲ್ಲರೂ ತಮ್ಮ ಮನೆಯಿಂದ, ಶಾಲೆಯಿಂದ, ಪಾರ್ಕ್‌ನಿಂದ ಅಥವಾ ಖಾಲಿ ಜಾಗದಿಂದ ಗಿಡ ನೆಡುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. 'ಒಬ್ಬೊಬ್ಬ



ವ್ಯಕ್ತಿಯೂ ವರ್ಷಕ್ಕೆ ಕನಿಷ್ಠ ಒಂದು ಗಿಡ ನೆಡಲಿ' ಎಂಬ ಸಂಕಲ್ಪ ನಮ್ಮ ಗ್ರಾಮ-ನಗರಗಳನ್ನು ಹಸಿರಾಗಿಸಲು ಸಾಕು. ಪರಿಸರ ಉಳಿಸುವುದು ಅಂದರೆ ನಮ್ಮ ಬದುಕನ್ನು ಉಳಿಸುವುದೇ ಆಗಿದೆ. ಗಿಡ ನೆಡುವ ಕೆಲಸಕ್ಕೆ ತಕ್ಷಣವೇ ಫಲಿತಾಂಶ ಗೋಚರವಾಗದಿದ್ದರೂ ಅದು ನಮ್ಮ ಮುಂದಿನ ಪೀಳಿಗೆಗೆ ಅಪಾರ ಕೊಡುಗೆಯಾಗುತ್ತದೆ. ಪ್ರಕೃತಿಯೊಂದಿಗೆ ನಂಟು ಬೆಳೆಸಿದಾಗ ಮಾತ್ರ ನಿಜವಾದ ಸಮೃದ್ಧಿ ಸಾಧ್ಯ.

ನಮ್ಮ ನಡಿಗೆಯೇ ಬದಲಾವಣೆಯ ಬೀಜವಾಗಲಿ. ಮಳೆ ಶುರುವಾಯಿತು ಬನ್ನಿ, ಗಿಡ ನೆಟ್ಟು ಪರಿಸರ ಉಳಿಸೋಣ!

**-ರವಿ ಹೊಂಬಾಳೆ.**
ಹವ್ಯಾಸಿ ಬರಹಗಾರರು, ಗದಗ.

---

# ಗ್ರಾಹಕರ ಜಾಗೃತಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳಾದ ಪ್ರಧಾನ ಮಂತ್ರಿ ಜೀವನಜ್ಯೋತಿ ಭೀಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆಯಲ್ಲಿ ನೋಂದಾಯಿಸಿಕೊಂಡ ಎಲ್ಲ ಬ್ಯಾಂಕಿನ ಗ್ರಾಹಕರು ತಮ್ಮ ಬ್ಯಾಂಕ್ ಖಾತೆಯಲ್ಲಿ 456 ರೂಪಾಯಿಗಳ



ಠೇವಣಿಯನ್ನು 31-05-2025ರ ಒಳಗಾಗಿ ಕಾಯ್ದಿರಿಸಿಕೊಳ್ಳಬೇಕಿದ್ದು, ಈ ಕುರಿತು ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ ಜನಜಾಗೃತಿ ಕಾರ್ಯಕ್ರಮ ಜರುಗಿತು. ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಮಲ್ಲಿಕಾರ್ಜುನ ಕುಲಕರ್ಣಿಯವರು ಪ್ರಧಾನ ಮಂತ್ರಿ ಜೀವನಜ್ಯೋತಿ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆಯಲ್ಲಿ ನೋಂದಾಯಿಸಿಕೊಂಡ ಗ್ರಾಹಕರು ತಮ್ಮ ಬ್ಯಾಂಕ್ ಖಾತೆಯಲ್ಲಿ ರೂ. 456ನ್ನು ಮೇ. 31ರ ಒಳಗಾಗಿ ಭರಿಸಿ ಈ ಯೋಜನೆಯನ್ನು ಮುಂದುವರಿಸಬೇಕೆಂದು ವಿನಂತಿಸಿಕೊಂಡಿದ್ದಾರೆ. ಕಾರ್ಯಕ್ರಮದಲ್ಲಿ ಚಂದ್ರಮ್ಮ ಹಾಗೂ ಬಸಪ್ಪ ಗಡಾದ ಸೇರಿದಂತೆ ನೂರಾರು ಬ್ಯಾಂಕ್ ಗ್ರಾಹಕರು ಭಾಗಹಿಸಿದ್ದರು.

---

# ಇಸ್ರೇಲ್ ಮೇಲೆ ನಿರ್ಬಂಧಕ್ಕೆ 800ಕ್ಕೂ ಹೆಚ್ಚು ಐರೋಪ್ಯ ಒಕ್ಕೂಟದ ವಕೀಲರು, ನ್ಯಾಯಾಧೀಶರು ಒತ್ತಾಯ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಐರೋಪ್ಯ ಒಕ್ಕೂಟದ 800ಕ್ಕೂ ಹೆಚ್ಚು ವಕೀಲರು, ಶಿಕ್ಷಣ ತಜ್ಞರು ಮತ್ತು ಮಾಜಿ ನ್ಯಾಯಾಧೀಶರು ಇಸ್ರೇಲ್ ಸರ್ಕಾರ ಮತ್ತು ಅದರ ಮಂತ್ರಿಗಳ ಮೇಲೆ ನಿರ್ಬಂಧಗಳನ್ನು ವಿಧಿಸಲು ಮತ್ತು ಗಾಜಾದಲ್ಲಿ "ನರಮೇಧವನ್ನು ತಡೆಗಟ್ಟಲು ಮತ್ತು ಅದನ್ನು ಶಿಕ್ಷಿಸಲು" ಕ್ರಮಗಳನ್ನು ತೆಗೆದುಕೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಪ್ರಧಾನಿ ಕೀರ್ ಸ್ಟಾರ್ಮರ್‌ಗೆ ಬರೆದ ಪತ್ರವು ಪ್ರಸ್ತುತ ಇಸ್ರೇಲ್‌ನಿಂದ ಅಂತರರಾಷ್ಟ್ರೀಯ ಕಾನೂನಿನ ಗಂಭೀರ ಉಲ್ಲಂಘನೆಗಳು ನಡೆಯುತ್ತಿವೆ ಮತ್ತು ಅವರಿಗೆ ಮತ್ತಷ್ಟು ಬೆದರಿಕೆ ಇದೆ ಎಂದು ಪ್ರತಿಪಾದಿಸಿದೆ.

---

### ವಿವಿಧ ಬೇಡಿಕೆಯನ್ನು ಆಗ್ರಹಿಸಿ ಪೌರಸೇವಾ ನೌಕರರ ಅನಿರ್ದಿಷ್ಟಾವಧಿ ಮುಷ್ಕರ

# ಪೌರ ನೌಕರರು ದೇಶ ಕಾಯುವ ಸೈನಿಕರಂತೆ



ರಾಜ್ಯದ ಎಲ್ಲ ನಗರ, ಸ್ಥಳೀಯ ಸಂಸ್ಥೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರನ್ನಾಗಿ ಪರಿಗಣಿವುದರೊಂದಿಗೆ ಸಂಜೀವಿನಿ, ಕೆಜಿಐಡಿ ಸೇರಿದಂತೆ ಸರ್ಕಾರಿ ನೌಕರರು ಪಡೆಯುವ ಎಲ್ಲ ಸೌಲಭ್ಯಗಳನ್ನು ನೀಡಬೇಕು. ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು, ಚಾಲಕರು, ಲೋಡರ್ಸ್, ಕ್ಲೀನರ್ಸ್, ಸ್ಯಾನಿಟರಿ ಸೂಪರ್‌ವೈಜರ್, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು. ದಿನಗೂಲಿ, ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವುದರ ಜೊತೆಗೆ ನೌಕರರನ್ನು ಕಾಯಂಗೊಳಿಸಬೇಕು ಇವೇ ಮುಂತಾದ ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿದರು.

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವ ಪೌರ ನೌಕರರನ್ನು ಬೆಂಬಲಿಸಿ ಪಟ್ಟಣದ ಪಟ್ಟಣ ಪಂಚಾಯಿತಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನೌಕರರೊಡನೆ ದಿನ ನಿತ್ಯದ ಕೆಲಸ, ಕಾರ್ಯಗಳನ್ನು ತ್ಯಜಿಸಿ ಮುಷ್ಕರದಲ್ಲಿ ಪಾಲ್ಗೊಂಡರು.

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ರಮೇಶ ಹಲಗಿಯವ ಮಾತನಾಡಿ, ರಾಜ್ಯದಲ್ಲಿ ಹಲವು ದಶಕಗಳಿಂದ ಪೌರಸೇವಾ ನೌಕರರು ಮಹಾನಗರ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಆರ್ಥಿಕ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇದು ಅಲ್ಲದೆ, ಈಗಾಗಲೇ ದೇಶಾದ್ಯಂತ ಮಹಾಮಾರಿ ಕೊರೋನಾದ ಸಂದರ್ಭದಲ್ಲಿ ನಮ್ಮ ಪೌರಸೇವಾ ನೌಕರರು ತಮ್ಮ ಜೀವದ ಹಂಗು ತೊರೆದು ಕರ್ತವ್ಯವನ್ನು ನಿರ್ವಹಿಸಿದ್ದಾರೆ. ಇವರ ಕಾಯಕ ದೇಶ ಕಾಯುವ ಸೈನಿಕರಂತೆ. ಆದ್ದರಿಂದ ಸರ್ಕಾರ ಈ ಕೂಡಲೇ ನಮ್ಮ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕು ಎಂದರು.

ಕ.ರಾ.ಪೌ.ನೌ ಸಂಘದ ಶಾಖಾಧ್ಯಕ್ಷ ನೀಲಪ್ಪ ಚಳ್ಳಮರದ, ಉಪಾಧ್ಯಕ್ಷ ಶಂಕ್ರಪ್ಪ ದೊಡ್ಡಣ್ಣವರ, ಜಿಲ್ಲಾ ನಿರ್ದೇಶಕ ಎಂ.ಎಚ್. ಸೀತಿಮನಿ, ಎ.ಎಸ್. ಮೆಣಸಗಿ, ಆರೀಫ ಮಿರ್ಜಾ, ಬಸವರಾಜ ಮಾಳವಾಡ, ಎಂ.ಎಸ್. ಹಿರೇವಡೇಯರ, ದುರಪ್ಪ ಪಾದಗಟ್ಟಿ, ಮಹಾದೇವ ಮ್ಯಾಗೇರಿ, ಸಿ.ವಿ. ಹೊನ್ನವಾಡ, ನಜಮಾ ಬೇಲೇರಿ, ಮಾರುತಿ ಚಲವಾದಿ, ಎಲ್ ರಕ್ಷತ, ಉದಯ ಮುದೇನಗುಡಿ, ಸಂಜು ಗುಡಿಮನಿ, ಫಕೀರೇಶ ತಮ್ಮಣ್ಣವರ, ನಿಂಗಪ್ಪ ಮಡಿವಾಳರ, ಪರಶುರಾಮ ನಡವಲಕೇರಿ, ಗುರುಲಿಂಗಪ್ಪ ಆರ್ಯಾದಮಠ, ಗೈಬುಸಾಬ ಇದ್ಲಿ, ಜೆ.ಡಿ. ಬಂಕಾಪೂರ, ಕಾವ್ಯಾ ಅರವಟಗಿಮಠ, ನಿರ್ಮಲಾ ಕಡೆತೋಟದ, ಕುಮಾರ ನಡವಲಕೇರಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

---

### ಬಾನು ಮುಷ್ತಾಕ್ ನಾಲ್ಕು ಗೋಡೆಗಳ ನಡುವೆ ಮೈಗೆ ಎಣ್ಣೆ ಹಚ್ಚಿಕೊಂಡು ಸುರಕ್ಷಿತವಾಗಿ ಕುಳಿತು ಬರೆದ ಲೇಖಕಿಯಲ್ಲ: ಚಳವಳಿಗಳಲ್ಲಿ ಬೆರೆತ ಬಂಡಾಯಗಾರ್ತಿ: ಕೆ.ವಿ.ಪ್ರಭಾಕರ್ ವಿಶ್ಲೇಷಣೆ

# ಭಾನು ಮುಷ್ತಾಕ್ ಮಾನವೀಯತೆ, ಭಾರತೀಯತೆಯನ್ನು ಬೆಸೆಯುವ ನೇಕಾರರು!



ಬಾಬಾ ಬುಡನ್ ಗಿರಿ ಘಟನೆಯಾಗಿರಲಿ, ಯಾವುದೇ ಹೋರಾಟವಾಗಿರಲಿ ಎಲ್ಲಾ ಹೊತ್ತಿನಲ್ಲಿಯೂ ಬಾನು ಅವರು ಸಾಮಾಜಿಕ, ರಾಜಕೀಯ ಕಾರ್ಯಕರ್ತೆಯಾಗಿ ಗಟ್ಟಿಯಾಗಿ ನಿಂತಿದ್ದಾರೆ. ಪತ್ರಕರ್ತೆಯಾಗಿ, ಬರಹಗಾರರಾಗಿ, ಸಾಮಾಜಿಕ ಹೋರಾಟಗಾರ್ತಿಯಾಗಿ, ಮಹಿಳೆಯಾಗಿ, ಮುಸ್ಲಿಂ ಮಹಿಳೆಯಾಗಿ ಬಾನು ಅವರಿಗೆ ಬಹಳ ದೊಡ್ಡ ಸ್ಥಾನವಿದೆ ಎನ್ನುವುದನ್ನು ಬೂಕರ್ ಇಂಟರ್ ನ್ಯಾಷನಲ್ ಪ್ರಶಸ್ತಿ ಇಡೀ ಜಗತ್ತಿಗೆ ಸಾರಿ ಹೇಳಿದೆ.

ಒಟ್ಟಿನಲ್ಲಿ ಬಾನು ಅವರಿಗೆ ಸಿಕ್ಕಿರುವ ವಿಶ್ವ ಮನ್ನಣೆ ಏಕ ಕಾಲಕ್ಕೆ ಕನ್ನಡಕ್ಕೆ, ಭಾರತೀಯ ಸಾಹಿತ್ಯ ಪರಂಪರೆಗೆ, ನಮ್ಮ ನಾಡಿನ ಸಾಂಸ್ಕೃತಿಕ ನಾಯಕರಾಗಿರುವ ನಿಜವಾದ ವಿಶ್ವಗುರು ಬಸವಣ್ಣನವರಾದಿಯಾಗಿ ಅಕ್ಕಮಹದೇವಿ ಮತ್ತು ಎಲ್ಲಾ ಶರಣ, ಸೂಫಿ ಪರಂಪರೆಗೆ, ಈ ಪರಂಪರೆಯ ಮೌಲ್ಯಗಳಿಗೆ ಸಿಕ್ಕಿರುವ ಮನ್ನಣೆ ಎಂದು ಭಾವಿಸುತ್ತೇನೆ.

**-ಕೆ.ವಿ.ಪ್ರಭಾಕರ್**, ಮುಖ್ಯಮಂತ್ರಿಗಳ ಮಾಧ್ಯಮ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಭಾನು ಮುಷ್ತಾಕ್ ಮಾನವೀಯತೆ ಮತ್ತು ಭಾರತೀಯತೆಯನ್ನು ಬೆಸೆಯುವ ನೇಕಾರರು. ಇವರಿಗೆ ಬಂದಿರುವ ಬೂಕರ್ ಇಂಟರ್ ನ್ಯಾಷನಲ್ ಪ್ರಶಸ್ತಿ ನಾಗರಿಕತೆಯ ಬಯಕೆ ಆಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ನುಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಬಹುರೂಪಿ ಮತ್ತು ಗಾಂಧಿ ಪ್ರತಿಷ್ಠಾನ ಗಾಂಧಿ ಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ "ಬೂಕರ್ ಇಂಟರ್ ನ್ಯಾಷನಲ್ ಪ್ರಶಸ್ತಿ ಪುರಸ್ಕೃತ ಬಾನು ಮುಷ್ತಾಕ್ ಅವರನ್ನು ಅಭಿನಂದಿಸಿ ಮಾತನಾಡಿದರು.

ವಿಚ್ಛಿದ್ರಕಾರಿ ಶಕ್ತಿಗಳು, ಮತಾಂದತೆ ಹಾಗೂ ಮೂಲಭೂತವಾದ ಒಟ್ಟಾಗಿ ಬೆಸೆದುಕೊಂಡು ಜಗತ್ತನ್ನು ನಾಶ ಮಾಡುತ್ತಿರುವ ಹೊತ್ತಲ್ಲಿ, ಭಾನು ಮುಷ್ತಾಕ್ ಅವರ ಮಾನವೀಯತೆಯ ಬೆಸುಗೆ ಮತ್ತು ಭಾರತೀಯತೆಯ ಬೆಸುಗೆಗೆ ಬೂಕರ್ ಇಂಟರ್ ನ್ಯಾಷನಲ್ ಪ್ರಶಸ್ತಿ ಬಂದಿದೆ ಎಂದು ಮೆಚ್ಚುಗೆ ಸೂಚಿಸಿದರು.

ಸಾಹಿತ್ಯದ ಹೆಸರಿನಲ್ಲಿ ಕೊಡುತ್ತಿರುವ ಈ ಸಂದೇಶವು, ಎಲ್ಲ ಮೂಲಭೂತವಾದಿ ಶಕ್ತಿಗಳಿಗೆ ಕೊಟ್ಟಿರುವ ಕಪಾಳಮೋಕ್ಷ ಎಂದು ನಾನು ಭಾವಿಸುತ್ತೇನೆ. ಇದು ಎಲ್ಲಾ ರೀತಿಯ ಧಾರ್ಮಿಕ ದರ್ಪಗಳಿಗೆ ಕೊಟ್ಟಿರುವ ಏಟು ಮತ್ತು ಮಾನವೀಯ ಧರ್ಮಕ್ಕೆ, ಎಲ್ಲಾ ಧರ್ಮದಲ್ಲಿರುವ ಮಾನವೀಯ ವ್ಯಕ್ತಿತ್ವಗಳಿಗೆ ಸಿಕ್ಕಿರುವ ಮನ್ನಣೆ ಕೂಡ ಆಗಿದೆ.

---

# ಉಚಿತ ಮೋತಿ ಬಿಂದು ಶಸ್ತ್ರ ಚಿಕಿತ್ಸಾ ಶಿಬಿರ



**■ವಿಜಯಸಾಕ್ಷಿ ಸುದ್ದಿ, ಗದಗ**

ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹುಲಕೋಟಿ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗದಲ್ಲಿ ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಎಚ್.ಕೆ. ಪಾಟೀಲ ಸೇವಾ ತಂಡದ ಸಹಕಾರದಲ್ಲಿ ಒಟ್ಟು 16 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ನೆರವೇರಿಸಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು. ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿ ಶಿಬಿರದ ಯಶಸ್ಸಿಗೆ ಶ್ರಮಿಸಿದರು.

---

### ಅವಳಿ ನಗರದಲ್ಲಿ ಆಸ್ತಿ ಸಮೀಕ್ಷೆಯ ಅಂಕಿಅಂಶಗಳಲ್ಲಿ ಹೊಂದಾಣಿಕೆ ಕಾಣುತ್ತಿಲ್ಲ: ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್

# ಅನಧಿಕೃತ ಬಡಾವಣೆ ಆಗದಂತೆ ಎಚ್ಚರಿಕೆ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹುಬ್ಬಳ್ಳಿ-ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ಈಗ ಮಾಡಿರುವ ಆಸ್ತಿ ಸಮೀಕ್ಷೆ ತಾಂತ್ರಿಕವಾಗಿ ಸರಿ ಇಲ್ಲ. ಹೆಸ್ಕಾಂನಿಂದ ಮೀಟರ್ ನೀಡಿರುವ ಮನೆಗಳ ಸಂಖ್ಯೆಗೂ ಮತ್ತು ಎಚ್.ಡಿ.ಎಂ.ಸಿ ಆಸ್ತಿ ಸಂಖ್ಯೆಗೂ ವ್ಯತ್ಯಾಸವಿದೆ. ಈ ಕುರಿತು ಕ್ರಮವಹಿಸಿ, ಸಮನ್ವಯತೆ ಸಾಧಿಸಿ, ಪ್ರತಿ ಆಸ್ತಿಗೂ ಟ್ಯಾಕ್ಸ್ ಬರುವಂತೆ ಕ್ರಮವಹಿಸಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಮಂಗಳವಾರ ಮಧ್ಯಾಹ್ನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಮತ್ತು ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.

ಕರ ವಸೂಲಾತಿ ಪ್ರಗತಿ ಆಗಬೇಕು. ಸುಮಾರು 45 ಸಾವಿರಕ್ಕೂ ಅಧಿಕ ಅನಧಿಕೃತ ಸೈಟ್, ನಿರ್ಮಾಣಗಳು ಆಗಿವೆ. ಇವುಗಳಿಂದ ನಾಗರಿಕ ಸವಲತ್ತು, ಮೂಲ ಸೌಕರ್ಯ ನೀಡಲು ಸಮಸ್ಯೆ ಆಗುತ್ತಿವೆ. ಈ ಬಗ್ಗೆ ಕ್ರಮವಹಿಸಬೇಕು. ಪ್ರತಿ ಆಸ್ತಿಯೂ ಟ್ಯಾಕ್ಸ್ ವ್ಯಾಪ್ತಿಗೆ ಒಳಪಡಿಸಬೇಕು. ಪ್ರತಿ ವಲಯದಲ್ಲಿ ಈ ಕುರಿತು ಅಭಿಯಾನ ಆಗಬೇಕು ಎಂದು ತಿಳಿಸಿದರು.

ಅವಳಿ ನಗರದಲ್ಲಿ ಕುಡಿಯುವ ನೀರಿನ ಕರ ವಸೂಲಾತಿ ಸುಮಾರು 149 ಕೋಟಿ ರೂ.ಗಳ ಬಾಕಿಯಿದೆ. ಜನರಿಗೆ ಸರಿಯಾದ ಸಮಯಕ್ಕೆ ನಿಗದಿತ ದಿನಗಳಲ್ಲಿ ನೀರು ಸರಬರಾಜು ಮಾಡಬೇಕು. ಎಲ್ಲ ಬಾಕಿ ವಸೂಲಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಒನ್ ಟೈಮ್ ಸೆಟ್ಲಮೆಂಟ್ ಮಾಡಲು ಬಹಳಷ್ಟು ಶಾಸಕರು ಮತ್ತು ಅಧ್ಯಕ್ಷರು ಒತ್ತಡ ತರುತ್ತಿದ್ದಾರೆ. ಅವರು ಮನವಿ ಸಲ್ಲಿಸಿದ ನಂತರ ಸರ್ಕಾರದ ಗಮನಕ್ಕೆ ತರುತ್ತೇನೆ. ಬಾಕಿ ಮೊತ್ತದ ಬಡ್ಡಿ ಮನ್ನಾ ಮಾಡಲು ಸರಕಾರಕ್ಕೆ ಒನ್ ಟೈಮ್ ಸೆಟ್ಲಮೆಂಟ್ ಆದೇಶಕ್ಕಾಗಿ ಪಾಲಿಕೆಯಿಂದ ಸೂಕ್ತ ಪ್ರಸ್ತಾವನೆ ಸಲ್ಲಿಸಲು ಸಚಿವರು ತಿಳಿಸಿದರು.



ಎಲ್ಲ 12 ವಲಯ ಸಹಾಯಕ ಆಯುಕ್ತರು ತಮ್ಮ ವಲಯದ ಎಲ್ಲ ವಾರ್ಡ್‌ಗಳಲ್ಲಿ ಸಮೀಕ್ಷೆ ಮಾಡಿ, ಪಿಜಿಗಳು ಎಷ್ಟಿವೆ, ಎಷ್ಟು ಜನ ವಾಸಿಸುತ್ತಿದ್ದಾರೆ, ಮಾಲೀಕರು ಪಿಜಿ ವಾಸಿಗಳ ವೈಯಕ್ತಿಕ ವಿವರ ಪಡೆದಿರುವ ಬಗ್ಗೆ, ಸಮೀಪದ ಪೊಲೀಸ್ ಠಾಣೆಗೆ ಪಿಜಿ ಆರಂಭಿಸಿದ ಕುರಿತು ಮಾಹಿತಿ ನೀಡಿರುವ ಬಗ್ಗೆ ಮತ್ತು ಪಿಜಿಯಲ್ಲಿ ಸಿಸಿಟಿವಿ, ಪಾರ್ಕಿಂಗ್, ವಾಣಿಜ್ಯ ಬಳಕೆಗೆ ವಿದ್ಯುತ್, ಕುಡಿಯುವ ನೀರು ಸೌಲಭ್ಯಗಳ ಮಾಹಿತಿ ಸಂಗ್ರಹಿಸಬೇಕು. ತಕ್ಷಣ ಅನಧಿಕೃತ ಪಿಜಿಗಳಿಗೆ ನೋಟಿಸ್ ನೀಡಬೇಕೆಂದು ಸಚಿವ ಸಂತೋಷ ಲಾಡ್ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವಳಿ ನಗರ ವ್ಯಾಪ್ತಿಯಲ್ಲಿ ಯಾವುದೇ ಅನಧಿಕೃತ ಬಡಾವಣೆ ನಿರ್ಮಾಣವಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಈಗಾಗಲೇ ಅನುಮತಿ ಇಲ್ಲದೆ ನಿರ್ಮಿಸಿರುವ ಬಡಾವಣೆಗಳಿಗೆ ನೋಟಿಸ್ ನೀಡಿ, ಸೂಕ್ತ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಚಿವರು ನಿರ್ದೇಶಿಸಿದರು.

ಲಕ್ಷಾಂತರ ಯುವಕ, ಯುವತಿಯರು ಓದು, ಉದ್ಯೋಗ ಹಾಗೂ ಇತರ ಕಾರಣಗಳಿಗಾಗಿ ಬೇರೆ ಬೇರೆ ಜಿಲ್ಲೆಗಳಿಂದ, ರಾಜ್ಯಗಳಿಂದ ಬಂದು ಅವಳಿನಗರದಲ್ಲಿ ವಾಸಿಸುತ್ತಿದ್ದಾರೆ. ಇವರಿಗೆ ವಸತಿ, ಊಟ ಕಲ್ಪಿಸುವ ಪಿಜಿಗಳ ಬಹುತೇಕ ಮಾಲೀಕರು ಸಂಬಂಧಿಸಿದ ಪ್ರಾಧಿಕಾರದಿಂದ ಅಧಿಕೃತ ಅನುಮತಿ ಪಡೆದಿರುವದಿಲ್ಲ ಎಂಬುದು ತಿಳಿದು ಬಂದಿದೆ ಎಂದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಕೃಷಿ ಭೂಮಿಯನ್ನು ಅನುಮತಿ ಇಲ್ಲದೆ ಕೃಷಿಯೇತರ ಚಟುವಟಿಕೆಗಳಿಗೆ ಬಳಕೆ ಮಾಡಿದರೆ ಅದನ್ನು ರದ್ದುಪಡಿಸಿ, ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶವಿದೆ. ಹುಡಾ ಮತ್ತು ಪಾಲಿಕೆ ಅಧಿಕಾರಿಗಳು ವರದಿ ಸಲ್ಲಿಸಿದರೆ ಕ್ರಮ ಜರುಗಿಸಲಾಗುತ್ತದೆ ಎಂದರು. ಮಹಾನಗರಪಾಲಿಕೆ ಮಹಾಪೌರ ರಾಮಣ್ಣ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ ಸನದಿ, ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ.ಸಂತೋಷ ಬಿರಾದಾರ ಅವರು ವೇದಿಕೆಯಲ್ಲಿ ಇದ್ದರು.

# ಪ್ರವಾಹ ನಿಯಂತ್ರಣಕ್ಕೆ ಶಾಶ್ವತ ಪರಿಹಾರ

▶▶ ಮೊದಲನೇ ಪುಟದಿಂದ

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಪೂರ್ವ ಮಳೆ ಅಧಿಕವಾಗಿರುವದರಿಂದ ಜಿಲ್ಲೆಯ ಬಹುತೇಕ ಭಾಗದಲ್ಲಿ ಬಿತ್ತನೆ ಆರಂಭವಾಗಿರುವುದಿಲ್ಲ. ರೈತರಿಗೆ ಅಗತ್ಯವಿರುವ ಬೀಜ, ರಸಗೊಬ್ಬರಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ವಿತರಿಸಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಪೊಲೀಸ್ ಅಧೀಕ್ಷಕ ಡಾ. ಗೋಪಾಲ ಎಮ್.ಬ್ಯಾಕೋಡ್, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿ.ಪಂ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಬೃಹತ್ ನೀರಾವರಿ ಇಲಾಖೆಯ ಎಇಇ ರವೀಂದ್ರ ಜಾಲಗಾರ, ನವಲಗುಂದ ತಹಸೀಲ್ದಾರ ಸುಧೀರ ಸಾವುಕಾರ, ಪುರಸಭೆ ಮುಖ್ಯಾಧಿಕಾರಿ ಶರಣು ಪೂಜಾರ, ಅಗ್ನಿಶಾಮಕ ದಳದ ಅಧಿಕಾರಿ ಅಮೃತ ಮತ್ತು ಸಿಬ್ಬಂದಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ನವಲಗುಂದ ತಾಲೂಕಿನ ವಿವಿಧ ಇಲಾಖೆಗಳ ಮುಖ್ಯಸ್ಥರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಪಾರ್ಕಿಂಗ್ ವಿವಾದದಲ್ಲಿ ನೆರೆಮನೆ ವ್ಯಕ್ತಿಯ ಮೂಗನ್ನೇ ಕಚ್ಚಿದ ವ್ಯಕ್ತಿ

■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಕಾನ್ಪುರದ ಬಹುಮಹಡಿ ವಸತಿ ಸೊಸೈಟಿಯಲ್ಲಿ ಪಾರ್ಕಿಂಗ್ ಸ್ಥಳದ ಬಗ್ಗೆ ನಡೆದ ವಾಗ್ವಾದದಲ್ಲಿ ಫ್ಲಾಟ್ ಮಾಲೀಕರು ಸೊಸೈಟಿಯ ಕಾರ್ಯದರ್ಶಿಯ ಮೂಗನ್ನು ಕಚ್ಚಿದ ಘಟನೆ ನಡೆದಿದೆ. ಈ ಘಟನೆ ಅಪಾರ್ಟ್‌ಮೆಂಟ್ ಸಂಕೀರ್ಣದಲ್ಲಿ ಅಳವಡಿಸಲಾದ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾಗಿದ್ದು, ಅದರ ವಿಡಿಯೋ ವೈರಲ್ ಆಗಿದೆ.

## ಪೌರ ನೌಕರರ ಸಂಘದ ಮುಷ್ಕರ 2ನೇ ದಿನಕ್ಕೆ | ಹೋರಾಟಕ್ಕೆ ಹಲವು ಮುಖಂಡರ ಬೆಂಬಲ

# ಒತ್ತಡಕ್ಕೆ, ಬೆದರಿಕೆಗೆ ಮಣಿಯುವದಿಲ್ಲ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯ ಎದುರಿನಲ್ಲಿ ಮಂಗಳವಾರದಿಂದ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ವತಿಯಿಂದ ಪುರಸಭೆಯ ಎಲ್ಲ ನೌಕರರು ಆರಂಭಿಸಿರುವ ಅನಿರ್ದಿಷ್ಟಾವಧಿ ಮುಷ್ಕರವು ಬುಧವಾರ 2ನೇ ದಿನಕ್ಕೆ ಕಾಲಿಟ್ಟಿದೆ. ಹೋರಾಟಕ್ಕೆ ಅನೇಕ ಮುಖಂಡರು, ಮಾಜಿ ಶಾಸಕರು ಹಾಗೂ ಸಂಘದ ಜಿಲ್ಲಾ ಪ್ರತಿನಿಧಿಗಳು ಆಗಮಿಸಿ ಬೆಂಬಲ ಸೂಚಿಸಿದ್ದಾರೆ.

ಬುಧವಾರ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಜಿಲ್ಲಾಧ್ಯಕ್ಷ ರಮೇಶ ಹಲಗಿ, ಗೌರವಾಧ್ಯಕ್ಷ ಕೆಂಚಪ್ಪ ಪೂಜಾರಿ, ಗದಗ ತಾಲೂಕು ಅಧ್ಯಕ್ಷ ಹೇಮೇಶ ಶೆಟ್ಟಿ, ವಿರೂಪಾಕ್ಷಪ್ಪ ರಾಮಗೇರಿ, ನಾಗರಾಜ ಬಳ್ಳಾರಿ ಭೇಟಿ ನೀಡಿ ಬೆಂಬಲ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ರಮೇಶ ಹಲಗಿ ಮಾತನಾಡಿ, ಸಂಘದ ವಿವಿಧ ಬೇಡಿಕೆಗಳನ್ನು ಈಡೇರಿಸವಂತೆ ಸರಕಾರಕ್ಕೆ 45 ದಿನಗಳನ್ನು ಗಡುವು ನೀಡಲಾಗಿತ್ತು. ಅಲ್ಲಿಯವರೆಗೆ ಕಪ್ಪು ಪಟ್ಟಿ ಧರಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಕೆಲಸ ಮಾಡುತ್ತ ಹೋರಾಟ ಮಾಡಿದ್ದೇವೆ. ಆದರೆ ಸರಕಾರ ನಮ್ಮ ಯಾವುದೇ ಹೋರಾಟಕ್ಕೂ ಸ್ಪಂದನೆ ನೀಡುತ್ತಿಲ್ಲ ಎಂದು ಆರೋಪಿಸಿದರು. ಇದೀಗ ಸಭೆ ಮಾಡಿ ಪ್ರತಿಭಟನೆ ಹಿಂತೆಗೆದುಕೊಳ್ಳುವಂತೆ ಹೇಳುತ್ತಿದ್ದಾರೆ. ಆದರೆ ಬೇಡಿಕೆ ಈಡೇರಿಕೆ ಬಗ್ಗೆ ಯಾವುದೇ ಸ್ಪಷ್ಟ ನಿರ್ಧಾರ ನೀಡುತ್ತಿಲ್ಲ. ಪೌರ ಕಾರ್ಮಿಕರು, ಡ್ರೈವರ್, ಕ್ಲೀನರ್ಸ್, ಲೋಡರ್ಸ್ ಸೇರಿದಂತೆ ಹೊರ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ಎಲ್ಲರನ್ನೂ ಸರಕಾರ ಖಾಯಂಗೊಳಿಸಬೇಕು ಹಾಗೂ ಇನ್ನಿತರ ಬೇಡಿಕೆಗಳು ಬಹುದಿನಗಳಿಂದ ಇದ್ದು ಇದರ ಬಗ್ಗೆ ಸರಕಾರ ಸ್ಪಷ್ಟ ಭರವಸೆ ನೀಡದ ಹೊರತು ಪ್ರತಿಭಟನೆ ಕೈಬಿಡುವ ಪ್ರಶ್ನೆಯೇ ಇಲ್ಲ. ಯಾವುದೇ ಒತ್ತಡಕ್ಕೆ, ಬೆದರಿಕೆಗೆ ಮಣಿಯುವದಿಲ್ಲ ಎಂದರು.

ಬುಧವಾರ ಮುಂಜಾನೆ ಮಾಜಿ ಶಾಸಕ ರಾಮಣ್ಣ ಲಮಾಣಿ ಹೋರಾಟದ ಸ್ಥಳಕ್ಕೆ ಆಗಮಿಸಿ ಹೋರಾಟಗಾರರಿಗೆ ಬೆಂಬಲ ಸೂಚಿಸಿ ಮಾತನಾಡಿ, ಮುಷ್ಕರ ನಿರತರ ಸಮಸ್ಯೆಗಳನ್ನು ಆಲಿಸಿ ಅವುಗಳನ್ನು ಬೇಗನೇ ಬಗೆಹರಿಸಬೇಕು ಎಂದು ಅವರು ಸರ್ಕಾರಕ್ಕೆ ಮನವಿ ಮಾಡಿದರು.

ಅದರಂತೆ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಸದಸ್ಯ ರಾಮಣ್ಣ ಗಡದವರ ಮುಷ್ಕರಕ್ಕೆ ಬೆಂಬಲ ಸೂಚಿಸಿದರು. ಈ ಸಂದರ್ಭದಲ್ಲಿ ಎನ್.ಆರ್. ಸಾತಪುತೆ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಪುರಸಭೆ ಕಚೇರಿ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಪೌರಕಾರ್ಮಿಕರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ ಇದ್ದರು.

ಸರ್ಕಾರಿ ನಿವೃತ್ತ ನೌಕರರ ಸಂಘದ ಸದಸ್ಯ ಪೂರ್ಣಾಜಿ ಖರಾಟೆ ಮುಷ್ಕರ ನಡೆಸುವವರಿಗೆ ಬೆಂಬಲ ಸೂಚಿಸಿ ಮಾತನಾಡಿ, ಪೌರ ಕಾರ್ಮಿಕರು ಒಂದು ದಿನ ಕೆಲಸ ಮಾಡದಿದ್ದರೆ ಇಡೀ ಊರು ಗಬ್ಬೆದ್ದು ನಾರುತ್ತದೆ. ಅಲ್ಲದೆ ನೀರು ಪೂರೈಕೆದಾರರು ಇದೇ ರೀತಿ ಮುಷ್ಕರ ನಡೆಸಿದರೆ ಜನತೆಗೆ ನೀರಿನ ಸಮಸ್ಯೆ ಉಂಟಾಗಲಿದೆ. ಇಂಥ ಕೆಲಸ ಮಾಡುವವರ ಬೇಡಿಕೆಗಳನ್ನು ಸರ್ಕಾರ ತಕ್ಷಣ ಈಡೇರಿಸಬೇಕು ಎಂದು ಒತ್ತಾಯಿಸಿದರು.

# ವಿದ್ಯಾಪೋಷಕದಿಂದ ಆರ್ಥಿಕ ನೆರವು

■ ವಿಜಯಸಾಕ್ಷಿ ಸುದ್ದಿ, ಗದಗ

ಆರ್ಥಿಕ ಸಂಕಷ್ಟದಲ್ಲಿರುವ ಅರ್ಹ ಪ್ರತಿಭಾನ್ವಿತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಧಾರವಾಡದ ವಿದ್ಯಾಪೋಷಕ ಸಂಸ್ಥೆಯು ನರ್ಚರ್ ಮೆರಿಟ್ ಯೋಜನೆಯಡಿಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗಾಗಿ ವೃತ್ತಿಪರ(ಇಂಜಿನಿಯರಿಂಗ್/ಮೆಡಿಕಲ್) ಪದವಿ ಸೇರಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಆರ್ಥಿಕ ನೆರವನ್ನು ನೀಡಲು ಮುಂದಾಗಿದೆ.

ವಿದ್ಯಾರ್ಥಿ/ವಿದ್ಯಾರ್ಥಿನಿಯರು 2025ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯನ್ನು ಮೊದಲನೆ ಸಲ ಬರೆದಿರಬೇಕು. ಹಾಗೂ ಶೇ. 80ಕ್ಕಿಂತ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ದ್ವಿತೀಯ ಪಿ.ಯು.ಸಿ ನಂತರ ಇಂಜಿನಿಯರಿಂಗ್, ಮೆಡಿಕಲ್ ವಿಭಾಗಗಳಿಗೆ ಪ್ರವೇಶ ಬಯಸುವವರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಕರ್ನಾಟಕಕ್ಕೆ ಸಂಬಂಧಪಟ್ಟು ಇಂಜಿನಿಯರಿಂಗ್ ಸೇರಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಸಿ.ಇ.ಟಿ ಪರೀಕ್ಷೆಯಲ್ಲಿ 25000ಕ್ಕಿಂತ ಕಡಿಮೆ ರ‍್ಯಾಂಕ್‌ನೊಂದಿಗೆ ಹಾಗೂ ಮೆಡಿಕಲ್ ಸೇರಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು 3000ಕ್ಕಿಂತ ಕಡಿಮೆ ರ‍್ಯಾಂಕ್‌ನೊಂದಿಗೆ ಹಾಗೂ ಅಖಿಲ ಭಾರತ ರ‍್ಯಾಂಕಿಂಗ್‌ನಲ್ಲಿ 60000ಕ್ಕಿಂತ ಕಡಿಮೆ ರ‍್ಯಾಂಕ್‌ನೊಂದಿಗೆ ಉತ್ತೀರ್ಣರಾಗಿರಬೇಕು. ಕುಟುಂಬದ ಮಾಸಿಕ ವರಮಾನ 15,000ರೂ–ಗಿಂತ ಕಡಿಮೆ ಇರಬೇಕು. ವಿದ್ಯಾರ್ಥಿ/ವಿದ್ಯಾರ್ಥಿನಿಯರ ಪಾಲಕರು/ಪೋಷಕರು ಕರ್ನಾಟಕದ ನಿವಾಸಿಯಾಗಿರಬೇಕು.

ಧನ ಸಹಾಯದ ಅರ್ಜಿಯು ವಿದ್ಯಾಪೋಷಕ ಸಂಸ್ಥೆಯ ಅಂತರ್ಜಾಲ www.vidya-poshak.ngo ದಲ್ಲಿ ಲಭ್ಯವಿದೆ. ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಅದರಲ್ಲಿ ನಮೂದಿಸಿರುವ ಮಾಹಿತಿಯನ್ನು ತುಂಬಿ ಅಗತ್ಯ ದಾಖಲಾತಿಗಳನ್ನು ಅಪ್‌ಲೋಡ್ ಮಾಡಬೇಕು. ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 30. ಹೆಚ್ಚಿನ ಮಾಹಿತಿಗಾಗಿ ವಿದ್ಯಾಪೋಷಕ, ನಂ. 307/4ಎ1, ನಗರಕರ ಕಾಲೋನಿ, ಮಹಿಷಿ ರಸ್ತೆ, ಮಾಳಮಡ್ಡಿ ಧಾರವಾಡ, ದೂರವಾಣಿ ಸಂಖ್ಯೆ :0836–2747357, 8861201828ನ್ನು ಸಂಪರ್ಕಿಸಬಹುದು.

ಗದಗ ಜಿಲ್ಲೆಯ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಡಾ. ಸಂಗಮೇಶ ಸಜ್ಜನರ ಮೊ– 9945555084, ಡಾ. ಪ್ರಭು ಗಂಜಿಹಾಳ ಮೊ– 9448775346, ಡಾ. ಪಿ.ಎಸ್. ಕಣವಿ ಮೊ– 9449121688, ಪ್ರೊ. ಎಚ್.ಎನ್. ಕಾಳೆ ಮೊ– 9108992921 ಇವರನ್ನು ಸಂಪರ್ಕಿಸಬಹುದಾಗಿದೆ.

## ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರವನ್ನು ವೀಕ್ಷಿಸಿದ ಜಿ.ಪಂ ಸಿಇಓ ಭರತ್ ಎಸ್

# ಗಣಿತ ಕಲಿಕೆಗೆ ಪ್ರಯೋಗಾಲಯ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗಣಿತ ವಿಷಯವನ್ನು ಅತ್ಯಂತ ಸರಳವಾಗಿ ಕಲಿಯಲು ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸ್ಥಾಪಿಸಿದ ಶ್ರೀಮತಿ ಹೇಮಲತಾ ಬಸವರಾಜ ಹೊರಟ್ಟಿ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರ ಉಪಯುಕ್ತವಾಗಿದೆ ಎಂದು ಗದಗ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹೇಳಿದರು.

ಅವರು ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಸರ್ಕಾರದ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಂದರ್ಭದಲ್ಲಿ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರವನ್ನು ವೀಕ್ಷಿಸಿ ಮಾತನಾಡಿದರು. ಸರಕಾರಿ ಪ್ರೌಢಶಾಲಾ ಹಂತದಲ್ಲಿ ಜಿಲ್ಲೆಯಲ್ಲಿಯೇ ಮೊದಲ ಗಣಿತ ಪ್ರಯೋಗಾಲಯ ಇದಾಗಿರುವುದು ಹೆಮ್ಮೆಯ ವಿಷಯ. 120ಕ್ಕೂ ಹೆಚ್ಚು ಮಾದರಿಗಳು ಇಲ್ಲಿ ಇದ್ದು, ಅವುಗಳ ಮೂಲಕ ಸರಳ ಗಣಿತ ಕಲಿಕೆಗೆ ಸಹಕಾರಿಯಾಗಿದೆ. ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದ ನಿರ್ದೇಶಕರಾದ ಡಾ.ವೀರಣ್ಣ ಬೋಳಿಶೆಟ್ಟಿ ಇವರ ಸಹಕಾರದೊಂದಿಗೆ ನಿರ್ಮಾಣಗೊಂಡ ಈ ಗಣಿತ ಪ್ರಯೋಗಾಲಯ ಅತ್ಯಂತ ಉತ್ಕೃಷ್ಟ ಮಟ್ಟದ ಪ್ರಯೋಗಾಲಯವಾಗಿರುವುದರಿಂದ ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಹೇಳಿದರು. ಶಾಲಾ ಉಸ್ತುವಾರಿ ಡಾ. ಬಸವರಾಜ ಧಾರವಾಡ ಮಾತನಾಡಿ, ಬಸವರಾಜ ಹೊರಟ್ಟಿ ದಂಪತಿಗಳಿಂದ ಎಲ್ಲ ರೀತಿಯ ಸಹಕಾರ ಈ ಶಾಲೆಗೆ ಸಿಕ್ಕಿದೆ. ಇದೊಂದು ಮಾದರಿ ಶಾಲೆಯಾಗಿ ಬೆಳೆಯುತ್ತಿರುವುದರಿಂದ ಅದರ ಸದುಪಯೋಗವನ್ನು ಇಲ್ಲಿನ ವಿದ್ಯಾರ್ಥಿಗಳು ಮಾಡಿಕೊಳ್ಳಲು ವಿನಂತಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ವ್ಹಿ. ಶೆಟ್ಟೆಪ್ಪನವರ, ನಗರಸಭೆ ಸದಸ್ಯೆ ವಿದ್ಯಾ ಗಡಗಿ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ನಂದಾ ಖಟವಟೆ, ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳಾದ ಸರಸ್ವತಿ ಕನವಳ್ಳಿ, ರವಿಪ್ರಕಾಶ, ಎಂ.ಎಸ್. ಕಂಬಳಿ, ಶಿವಕುಮಾರ ಕುರಿ, ಅರವಟಗಿ, ಶಂಕರ ಹಡಗಲಿ, ಎಸ್.ಡಿ. ಪ್ರಭಯ್ಯನಮಠ, ಜೆ.ಬಿ. ಅಣ್ಣಿಗೇರಿ, ಬಿ.ಎಸ್. ಯರಗುಡಿ ಮುಂತಾದವರು ಉಪಸ್ಥಿತರಿದ್ದರು.

ಸಾ.ಶಿ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಗಣಿತ ಪ್ರಯೋಗಾಲಯ ಕುರಿತು ಮಾಹಿತಿ ನೀಡಿ, ಈ ಶಾಲೆಯ ಸಂಪೂರ್ಣ ಅಭಿವೃದ್ಧಿಗೆ ಬಸವರಾಜ ಹೊರಟ್ಟಿಯವರೊಂದಿಗೆ ಅವರ ಧರ್ಮಪತ್ನಿಯವರಾದ ಶ್ರೀಮತಿ ಹೇಮಲತಾ ಹೊರಟ್ಟಿಯವರು ಕೂಡಾ ಅವ್ವ ಸೇವಾ ಟ್ರಸ್ಟ್ ಮೂಲಕ ಎಲ್ಲ ರೀತಿಯಿಂದ ಸಹಕಾರ ಮಾಡಿ ಈ ಗಣಿತ ಪ್ರಯೋಗಾಲಯ ಸ್ಥಾಪನೆಗೆ ಶ್ರಮಿಸಿದ್ದಾರೆ. ಹೀಗಾಗಿ ಸಾ.ಶಿ.ಇಲಾಖೆ ಪರವಾಗಿ ಅವರಿಗೆ ಅಭಿನಂದಿಸುವುದಾಗಿ ಹೇಳಿದರು. ಇಲ್ಲಿಯ ಮಾದರಿಗಳು ರಾಜ್ಯ ಮಟ್ಟದ ಗಣಿತ ಪರಿಣಿತರಿಂದ ಪರೀಕ್ಷಿಸಿ ಇಲ್ಲಿ ಸ್ಥಾಪಿಸಲಾಗಿದೆ. ಅತ್ಯಂತ ಉಪಯುಕ್ತವಾದ ಈ ಮಾದರಿಗಳು ವಿದ್ಯಾರ್ಥಿಗಳ ಕಲಿಕೆಗೆ ಹೆಚ್ಚು ಸಹಕಾರಿಯಾಗಿವೆ ಎಂದರು.

# ವೃದ್ಧರು, ಗರ್ಭಿಣಿಯರು ಮಾಸ್ಕ್ ಧರಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಸುಂಡಿ ಗ್ರಾಮ ಪಂಚಾಯಿತಿಯಲ್ಲಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ ಕಾಗದಗಾರ ನೇತೃತ್ವದಲ್ಲಿ ಕೋವಿಡ್ ಜಾಗೃತಿ ಸಭೆ ಜರುಗಿತು.

ಈ ಸಂದರ್ಭದಲ್ಲಿ ಅಲ್ತಾಫ ಕಾಗದಗಾರ ಮಾತನಾಡಿ, ಗರ್ಭಿಣಿಯರು, ವೃದ್ಧರು, ಹೃದಯ ಸಂಬಂಧಿ ಕಾಯಿಲೆ ಇರುವವರು, ಶ್ವಾಸಕೋಶ ಸಮಸ್ಯೆ ಇದ್ದವರು ಮಾಸ್ಕ್ ಧರಿಸುವುದು ಒಳ್ಳೆಯದು. ಪಾಲಕರಲ್ಲಿ ಅನಾರೋಗ್ಯ ಇದ್ದರೆ ಮಕ್ಕಳನ್ನು ಶಾಲೆಗೆ ಕಳುಹಿಸಬೇಡಿ ಎಂದು ತಿಳಿಸಿ ಶಿಕ್ಷಕರಿಗೆ ಮಕ್ಕಳ ಆರೋಗ್ಯದ ಕಾಳಜಿ ಬಗ್ಗೆ ತಿಳಿಸಿದರು.

ಸದಸ್ಯರಾದ ಸೋಮರಡ್ಡಿ ರಾಮೇನಹಳ್ಳಿ ಇವರ ಸೂಚನೆ ಮೇರೆಗೆ ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಸಜ್ಜನರ ಮಾತನಾಡಿ, ಈ ಹಿಂದೆಯೂ ಕೊರೋನಾ ಉಲ್ಬಣವಾದಾಗ ಗ್ರಾಮ ಪಂಚಾಯತ ಸದಸ್ಯರ ನೇತೃತ್ವದಲ್ಲಿ ಎಲ್ಲ ಇಲಾಖೆಯ ಸಹಕಾರದಿಂದ ಕೆಲಸ ಮಾಡಿದ್ದೇವೆ. ಯಾರೂ ಭಯಪಡುವ ಅಗತ್ಯವಿಲ್ಲ. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸಿ. ಜ್ವರ, ಕೆಮ್ಮು, ನೆಗಡಿ ಹೆಚ್ಚು ದಿನ ಇದ್ದಲ್ಲಿ ಚಿಕಿತ್ಸೆ ಪಡೆಯಿರಿ ಎಂದರು.

ಹೋಮಿಯೋಪತಿ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ. ಸಂಜೀವ ನಾರಪ್ಪನವರ ಮಾತನಾಡಿ, ಪ್ರತಿಯೊಬ್ಬರೂ ಪೌಷ್ಟಿಕ ಆಹಾರ ಸೇವಿಸಿ. ಮಲಗುವಾಗ ಒಂದು ಲೋಟ ಬಿಸಿನೀರು ಕುಡಿಯಿರಿ. ಮಳೆಗಾಲದಲ್ಲಿ ಡೆಂಗ್ಯು, ಚಿಕುನ್ ಗುನ್ಯಾ ಬರುವ ಸಾಧ್ಯತೆ ಹೆಚ್ಚಿರುವುದರಿಂದ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡಲು ಕ್ರಮ ಕೈಗೊಳ್ಳೋಣ ಎಂದರು.

ಸಮುದಾಯ ಆರೋಗ್ಯ ಅಧಿಕಾರಿ ರಾಧಿಕಾ ಶಾಪೂರ ವಯಸ್ಕರ ಬಿಸಿಜಿ ಬಗ್ಗೆ ಮಾಹಿತಿ ನೀಡಿದರು. ಗ್ರಾ.ಪಂ ಕಾರ್ಯದರ್ಶಿ ಪ್ರದೀಪ ಆಲೂರ ನಿರೂಪಿಸಿ ವಂದಿಸಿದರು.

ಸೋಮರಡ್ಡಿ ರಾಮೇನಹಳ್ಳಿ, ಯಲ್ಲರಡ್ಡಿ ಬಸವರಡ್ಡಿಯವರ, ಮೈಲಪ್ಪ ಹೊಸಮನಿ, ಶಂಕ್ರಮ್ಮ ನೀರಲಗಿ, ಮಂಜುಳಾ ಹೊಸಮನಿ ಸೇರಿದಂತೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಮುಖ್ಯೋಪಾಧ್ಯಾಯರು, ಗ್ರಾ.ಪಂ ಸಿಬ್ಬಂದಿಗಳು ಇದ್ದರು.

# ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಾರ್ಡ್ ನಂ. 6ರ ಗಾರ್ಗಿಪೇಟೆಯಲ್ಲಿಯ ಈಶ್ವರ ದೇವಸ್ಥಾನದ ಆವರಣದಲ್ಲಿ ಮಹಿಳೆಯರಿಗೆ ಉಚಿತ ಹೊಲಿಗೆ ಯಂತ್ರ ಹಾಗೂ ದೈಹಿಕ ಅಂಗವಿಕಲರಿಗೆ ವೀಲ್‌ಚೇರ್ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನುದ್ದೇಶಿಸಿ ಮಾತನಾಡಿದ ನಗರಸಭಾ ಮಾಜಿ ಸದಸ್ಯ ಮಂಜುನಾಥ ಎಚ್. ಮುಳಗುಂದ, ಬಡತನ ನಿರ್ಮೂಲನೆಗೆ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಮತ್ತು ಆರ್ಥಿಕವಾಗಿ ಮುಂದೆ ಬರಲು ಸ್ವಯಂ ಉದ್ಯೋಗ ಕೈಗೊಳ್ಳಬೇಕು. ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮಹಿಳೆಯರು ಮುಂದೆ ಬಂದರೆ ದೇಶ ಪ್ರಗತಿಯತ್ತ ಸಾಗುವುದು ಎಂದರು. ನಾಮನಿರ್ದೇಶಿತ ಸದಸ್ಯ ಬಾಬು ನರಸಾಪೂರ ಮಾತನಾಡಿ, ಸಮಾಜಮುಖಿ ಕೆಲಸ ಮಾಡಲು ಅಧಿಕಾರವೇ ಬೇಕೆಂದಿಲ್ಲ. ಇಚ್ಛಾಶಕ್ತಿ ಇರಬೇಕು ಎಂದು ಅಭಿಪ್ರಾಯಪಟ್ಟರು. ಕಾಂಗ್ರೆಸ್ ಮುಖಂಡರಾದ ರಾಮಣ್ಣ ರಾಂಪೂರ ಮಾತನಾಡಿದರು.

ಈ ಸಂದರ್ಭದಲ್ಲಿ ಶಂಕರಪ್ಪ ಮಾಳಶೆಟ್ಟಿ, ಈರಣ್ಣ ಕೊಡಗಂಟಿ, ಮುತ್ತು ರೊಟ್ಟಿ, ನಂದೀಶ ಅಣ್ಣಿಗೇರಿ, ಚಿನ್ನಪ್ಪ ಕೊಡಗಂಟಿ, ಶಂಭಣ್ಣ ಹಳ್ಳಿ, ನಂದೇಶಪ್ಪ ಮಾಳೆಕೊಪ್ಪ, ಈರಣ್ಣ ಗಾರ್ಗಿ, ಮಲ್ಲೇಶಪ್ಪ ಮಾಳೆಕೊಪ್ಪ ಮುಂತಾದವರು ಉಪಸ್ಥಿತರಿದ್ದರು.

# ಶಾಲಾ ಆವರಣದ ಸ್ವಚ್ಛತೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

2025/26ನೇ ಸಾಲಿನ ಶೈಕ್ಷಣಿಕ ವರ್ಷ ಶಾಲಾ ಪ್ರಾರಂಭೋತ್ಸವದ ಅಂಗವಾಗಿ ಬುಧವಾರ ಬೆಳಿಗ್ಗೆ ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರ ಆವರಣ ಹಾಗೂ ಶೌಚಾಲಯಗಳನ್ನು ಅವ್ವ ಸೇವಾ ಪ್ರತಿಷ್ಠಾನದ ಕಾರ್ಯದರ್ಶಿ ಮಂಜುನಾಥ ಮಟ್ಟಿ ಶಿಕ್ಷಕರ ನೇತೃತ್ವದಲ್ಲಿ ಸ್ವಚ್ಛಗೊಳಿಸಿದರು.

ಈ ಸಂದರ್ಭದಲ್ಲಿ ಯೋಧ ರಾಜು ರಸಾಳಕರ ಮಾತನಾಡಿ, ಸರಕಾರಿ ಶಾಲೆಗಳ ಉಳಿಯಬೇಕು, ಬೆಳೆಯಬೇಕು. ಸರಕಾರಿ ಶಾಲೆಗಳಲ್ಲಿ ಅನುಭವಿ ಶಿಕ್ಷಕರಿರುತ್ತಾರೆ. ಸರಕಾರಿ ಶಾಲೆಯಲ್ಲಿ ಮಕ್ಕಳ ದಾಖಲಾತಿ ಮಾಡಿಸಬೇಕು, ಸರಕಾರ ಹಾಗೂ ಶಿಕ್ಷಣ ಇಲಾಖೆ ಮಕ್ಕಳಿಗಾಗಿ ಹಗಲಿರುಳು ಶ್ರಮಿಸುತ್ತಿವೆ. ನನಗೂ ಈ ಶಾಲೆಯ ಸೇವಾ ಋಣ ತೀರಿಸುವ ಭಾಗ್ಯ ಕರುಣಿಸಿದ ಅವ್ವ ಸೇವಾ ಪ್ರತಿಷ್ಠಾನ ಸಾಮಾಜಿಕ ಕಾರ್ಯ ಮಾಡುತ್ತಿದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಿಕ್ಷಕ ಕೆ.ಎಂ. ಹೆರಕಲ್ಲ, ಶರಣಪ್ಪ ಬಾಳಿಕಾಯಿ, ಸಾಹಿತಿ ಮಂಜುನಾಥ ಮಟ್ಟಿ, ಪ್ರಕಾಶ ಬಡಿಗೇರ, ವಿದ್ಯಾರ್ಥಿಗಳಾದ ಶ್ರೀನಿಧಿ ಸಿದ್ದನಗೌಡರ, ಕಾರ್ತಿಕ ಸಿದ್ದನಗೌಡರ, ವೀಣಾ ಟಿ, ಎಸ್.ವಿ. ಹಿರೇಮಠ, ಎಚ್.ಆರ್. ಭಜಂತ್ರಿ, ಅಡುಗೆ ಸಿಬ್ಬಂದಿ ಸಂಕಮ್ಮಾ ಯಳವತ್ತಿ, ರೇಣುಕಾ ಬಗಾಡೆ, ಮಾಬುಬ್ಬಿ ಹೊಸೂರ, ಲಕ್ಷ್ಮೀ ಬೇಂದ್ರೆ ಮುಂತಾದವರಿದ್ದರು.




ಗದಗ ತಾಲೂಕಿನ ಅಡವಿಸೋಮಾಪೂರ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾದ ಪವಿತ್ರಾ ಪ್ರಹ್ಲಾದ ಹೊಸಳ್ಳಿ ಅವರನ್ನು ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಅವರ ನೇತೃತ್ವದಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಹಾಲುಮತ ಮಹಾಸಭಾದ ಗೌರವಾಧ್ಯಕ್ಷ ನಾಗರಾಜ ಮೆಣಸಗಿ, ಮಾಜಿ ಅಧ್ಯಕ್ಷ ಪ್ರಹ್ಲಾದ ಹೊಸಳ್ಳಿ, ಉಪಾಧ್ಯಕ್ಷರುಗಳಾದ ಸೋಮನಗೌಡ ಪಾಟೀಲ, ರಾಘು ವಗ್ಗನವರ, ಪ್ರಧಾನ ಕಾರ್ಯದರ್ಶಿ ಮುತ್ತು ಜಡಿ, ಸಂಘಟನಾ ಕಾರ್ಯದರ್ಶಿ ಸತೀಶ ಗಿಡ್ಡಹನುಮಣ್ಣವರ, ಉಮೇಶ ಪೂಜಾರ, ರವಿ ಲಕ್ಕಣ್ಣವರ ಮುಂತಾದವರು ಉಪಸ್ಥಿತರಿದ್ದರು.

# ಹುಳು ತಿಂದಿರುವ ಕಳಪೆ ಬೀಜ ವಿತರಣೆ; ರೈತ ಮುಖಂಡರ ಆಕ್ರೋಶ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಎಪಿಎಂಸಿ ಆವರಣದ ರೈತ ಸಂಪರ್ಕ ಕೇಂದ್ರದಲ್ಲಿ ಹುಳು ತಿಂದಿರುವ ಕಳಪೆ ಬೀಜ ವಿತರಣೆ ಮಾಡುತ್ತಿರುವುದು ರೈತ ಸಂಘ ನಡೆಸಿದ ಕಾರ್ಯಾಚರಣೆಯಲ್ಲಿ ಬಟಾಬಯಲಾಗಿದೆ.

ಕೃಷಿ ಇಲಾಖೆಯಿಂದ ರೈತರಿಗೆ ವಿತರಿಸುವ ಬಿತ್ತನೆ ಬೀಜ ತುಂಬಾ ಕಳಪೆ ಆಗಿದ್ದು, ಬೀಜದ ಪ್ಯಾಕೇಟ್ ಓಪನ್ ಮಾಡಿದ್ರೆ ಸಾಕು, ನುಶಿ ತಿಂದ ಕಳಪೆ ಬೀಜ ಪತ್ತೆಯಾಗಿದೆ. ಹುಳ ತಿಂದ ಬೀಜ ಕೃಷಿ ಇಲಾಖೆ ಹೇಗೆ ಸರ್ಟಿಫೈಡ್ ಮಾಡಿದೆ ಅಂತ ರೈತರು ಪ್ರಶ್ನೆ ಮಾಡಿದ್ದಾರೆ. ಅಲ್ಲದೇ ಇಲಾಖಾ ಅಧಿಕಾರಿಗಳ ವಿರುದ್ಧ ರೈತರು ತೀವ್ರ ಆಕ್ರೋಶ ಹೊರ ಹಾಕಿದ್ದಾರೆ. ಒಂದೆಡೆ ಮುಂಗಾರು ಮಳೆ ಉತ್ತಮವಾಗಿದ್ದು, ಹೀಗಾಗಿ ರೈತರ ಮುಖದಲ್ಲಿ ಮಂದಹಾಸ ಮೂಡಿದೆ. ಗದಗ ಜಿಲ್ಲೆಯಲ್ಲಿ ಹೆಸರು ಬಿತ್ತನೆಗೆ ರೈತರು ತಯಾರಿ ನಡೆಸಿದ್ದಾರೆ. ಆದ್ರೆ, ಕಳಪೆ ಬೀಜ ನೋಡಿ ರೈತರು ಕಂಗಾಲಾಗಿದ್ದಾರೆ. ಇಂಥ ಬೀಜ ಬಿತ್ತನೆ ಮಾಡಿದ್ರೆ, ನಾಟಿಯಾಗಲ್ಲ.. ಇದು ಸರ್ಕಾರ ರೈತರಿಗೆ ಮಾಡುವ ಮೋಸ ಅಂತ ಕಿಡಿಕಾರಿದ್ದಾರೆ. ಅಲ್ಲದೇ ಕಳಪೆ ಬೀಜ ವಿತರಣೆ ಮಾಡಿದ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ರೈತರು ಆಗ್ರಹಿಸಿದ್ದಾರೆ. ಮೊದ್ಲೆ ರೈತರು ಸಂಕಷ್ಟದಲ್ಲಿ ಇದ್ದಾರೆ. ಇಂಥ ಸ್ಥಿತಿಯಲ್ಲಿ ಕಳಪೆ ಬೀಜ ವಿತರಣೆ ಮಾಡಿದ್ರೆ ಹೇಗೆ ಅಂತ ರೈತರು ಪ್ರಶ್ನೆ ಮಾಡಿದ್ದಾರೆ. ಕೂಡಲೇ ಕಳಪೆ ಬೀಜ ವಿತರಣೆ ನಿಲ್ಲಿಸಬೇಕು. ರೈತರಿಗೆ ಆಗುತ್ತಿರುವ ಮೋಸ ತಡೆಯಬೇಕು ಅಂತ ಒತ್ತಾಯಿಸಿದ್ದಾರೆ.

## ವಾಹನ ಚಾಲನಾ ತರಬೇತಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

2023–24ನೇ ಸಾಲಿನ SCSP/TSP ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅರ್ಹ/ನಿರುದ್ಯೋಗಿ ಯುವಕ/ಯುವತಿಯರಿಗೆ ಊಟ-ಉಪಹಾರ ಹಾಗೂ ವಸತಿ ಸಹಿತ 30 ದಿನಗಳವರೆಗೆ ಲಘು ಮತ್ತು ಭಾರಿ ವಾಹನ ಚಾಲನಾ ತರಬೇತಿಯನ್ನು ಪರವಾನಿಗೆ ಪತ್ರದ ವ್ಯವಸ್ಥೆಯೊಂದಿಗೆ ಉಚಿತವಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹೊಸದಾಗಿ ನಿರ್ಮಾಣಗೊಂಡಿರುವ ಶಿಗ್ಗಾವ ತರಬೇತಿ ಕೇಂದ್ರ, ಗಂಗಿಭಾವಿ ರಸ್ತೆ, ಶಿಗ್ಗಾಂವ ಇಲ್ಲಿ ನೀಡಲಾಗುವುದು.

ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ–8095161818 / 9449925367 / 9449971416ನ್ನು ಸಂಪರ್ಕಿಸಬಹುದಾಗಿದೆ ಎಂದು ಹುಬ್ಬಳ್ಳಿಯ ಪ್ರಾದೇಶಿಕ ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಮಲ ಹಾಸನ್ ಅವರಿಗೆ ಕನ್ನಡ ಇತಿಹಾಸದ ಅರಿವಿಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ಕನ್ನಡ ಭಾಷೆಯು ತಮಿಳಿನಿಂದ ಹುಟ್ಟಿದೆ' ಎಂಬ ಕಮಲ್ ಹಾಸನ್ ಅವರ ಹೇಳಿಕೆ ವ್ಯಾಪಕ ಭಾಷಾ ವಿವಾದಕ್ಕೆ ಕಾರಣವಾದ ನಂತರ, 'ಕಮಲ್ ಹಾಸನ್ ಅವರಿಗೆ ಕನ್ನಡದ ಇತಿಹಾಸದ ಅರಿವಿಲ್ಲ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಿರುಗೇಟು ಕೊಟ್ಟಿದ್ದಾರೆ.

ತಮಿಳುನಾಡಿನಲ್ಲಿ ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ರಾಜಕೀಯ ಪಕ್ಷದ ಮುಖ್ಯಸ್ಥರಾಗಿರುವ ಕಮಲ್ ಹಾಸನ್, ಕನ್ನಡ ತಮಿಳು ಭಾಷೆಯಿಂದ ಹುಟ್ಟಿದೆ ಎಂದು ಹೇಳಿದ ನಂತರ ಅವರ ಪ್ರತಿಕ್ರಿಯೆ ಬಂದಿದೆ.

"ಕನ್ನಡಕ್ಕೆ ದೀರ್ಘ ಇತಿಹಾಸವಿದೆ; ಕಮಲ್ ಹಾಸನ್ ಅವರಿಗೆ ಅದರ ಅರಿವಿಲ್ಲ" ಎಂದು ಸಿದ್ದರಾಮಯ್ಯ ಹೇಳಿದರು.

### ಶ್ರೀ ಬಸವೇಶ್ವರ ಮಂಗಲ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಒಡೆದ ಮನಸ್ಸುಗಳನ್ನು ಬೆಸೆಯುವುದೇ ಧರ್ಮ

■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ಹುಟ್ಟು-ಸಾವು ನಮ್ಮ ಕೈಯಲ್ಲಿ ಇಲ್ಲ. ಆದರೆ ಬದುಕು ನಮ್ಮ ಕೈಯಲ್ಲಿದೆ. ಮಾತು ಒಂದುಗೂಡಿಸಬೇಕೇ ಹೊರತು ಒಡೆಯಬಾರದು. ಒಡೆದು ಹೋದ ಮನಸ್ಸುಗಳನ್ನು ಬೆಸೆಯುವುದೇ ನಿಜವಾದ ಧರ್ಮವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಬೇಲೂರು ಗ್ರಾಮದಲ್ಲಿ ಶ್ರೀ ಬಸವೇಶ್ವರ ಮಂಗಲ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನ ಉತ್ಕೃಷ್ಟ ಅರಿವು, ಆಚಾರಗಳಿಂದ ಸಮೃದ್ಧಗೊಳ್ಳಬೇಕು. ಧರ್ಮ, ಸಂಪ್ರದಾಯ ಪರಂಪರೆಗಳಲ್ಲಿ ನಮ್ಮ ನಂಬಿಕೆ, ವಿಶ್ವಾಸಗಳನ್ನು ಕಳೆದುಕೊಳ್ಳಬಾರದು. ಜೀವನಾಧಾರಕ್ಕೆ ನೀರು, ಅನ್ನ, ಗಾಳಿ ಮತ್ತು ಒಳ್ಳೆಯ ಮಾತು ಮುಖ್ಯ. ಹಾಗೆಯೇ ಜೀವನದ ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆ ಅಗತ್ಯವಾಗಿದೆ. ಜ್ಞಾನ ಕ್ರಿಯೆಗಳ ಸಂಗಮದ ಬದುಕು ಉತ್ಕರ್ಷ ಬದುಕಿಗೆ ಅಡಿಪಾಯವಾಗುತ್ತದೆ. ಉತ್ತಮ ಚಿಂತನೆಗಳು ನಮ್ಮ ಬದುಕಿಗೆ ಬೆಳಕು ತೋರುವುದು ಅಷ್ಟೇ ಅಲ್ಲ. ಪರರ ಬದುಕಿಗೂ ಬೆಳಕಾಗಿ ಕಾಣುತ್ತದೆ. ಮನುಷ್ಯನಿಗೆ ವ್ಯಕ್ತಿತ್ವ ಮುಖ್ಯವೇ ಹೊರತು ಆಸ್ತಿ-ಅಂತಸ್ತಲ್ಲ. ಆದರ್ಶ ಆಲೋಚನೆ ಮತ್ತು ಆಚರಣೆಗಳಲ್ಲಿ ಘನವಾದ ವ್ಯಕ್ತಿತ್ವ ಇದೆಯೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಬೋಧಿಸಿದ್ದಾರೆ ಎಂದರು.



ಸಮಾರಂಭ ಉದ್ಘಾಟಿಸಿದ ದಿಂಡದಹಳ್ಳಿ ಪಶುಪತಿ ಶಿವಾಚಾರ್ಯರು ಮಾತನಾಡಿ, ಎಲ್ಲವೂ ಇದ್ದು ಶಕ್ತಿಶಾಲಿಗಳು ಎನಿಸುವುದು ದೊಡ್ಡದಲ್ಲ. ಎಲ್ಲವನ್ನು ಕಳೆದುಕೊಂಡರೂ ತೋರುವ ಧೈರ್ಯವೇ ನಿಜವಾದ ಶಕ್ತಿ. ಅಡವಿಗಳಲ್ಲಿ ರಾಮ ಅಲೆದರೂ ಕೆಡಲಿಲ್ಲ. ಅಂತಃಪುರದಲ್ಲಿ ರಾವಣ ಬೆಳೆದರೂ ಒಳ್ಳೆಯವನಾಗಲಿಲ್ಲ. ಲಿಂ.ಶಿವಾನಂದ ಶ್ರೀಗಳ ಮಾರ್ಗದರ್ಶನ ಬೇಲೂರು ಗ್ರಾಮಸ್ಥರಿಗೆ ದೊರೆತಿರುವುದರಿಂದ ಇಂಥ ಒಳ್ಳೆಯ ಕಾರ್ಯ ಮಾಡಲು ಸಾಧ್ಯವಾಗಿದೆ ಎಂದರು.

ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು ಮಾತನಾಡಿ, ಉರಿಯುವ ದೀಪ ಸಹಸ್ರಾರು ಜನರಿಗೆ ಬೆಳಕು ನೀಡುವಂತೆ ಆಚಾರ್ಯರು ಮತ್ತು ಋಷಿಮುನಿಗಳು ತೋರಿದ ದಾರಿ ನಮ್ಮೆಲ್ಲರ ಬಾಳಿಗೆ ಬೆಳಕು ನೀಡುತ್ತವೆ. ಪರಶಿವನ ಸಾಕಾರ ರೂಪವೇ ಶ್ರೀ ಗುರು. ಗುರು, ಧರ್ಮ, ದೇವರಲ್ಲಿ ನಮ್ಮೆಲ್ಲರ ನಂಬಿಕೆ ಗಟ್ಟಿಯಾಗಬೇಕೆಂದರು.

ಕುರವತ್ತಿ ಹಿರೇಮಠದ ನಂದೀಶ್ವರ ಶಿವಾಚಾರ್ಯರು, ಹಿರೇಹಡಗಲಿ ಬೇಲೂರು ಶಾಖಾ ಮಠದ ಹಾಲಸ್ವಾಮಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ವಿಠಲಾಪುರ ಹಿರೇಮಠದ ಗಂಗಾಧರಸ್ವಾಮಿ ಇವರಿಂದ ಭಕ್ತಿ ಗೀತೆ ಜರುಗಿತು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಕಾರ್ಯಕ್ರಮದ ಅಂಗವಾಗಿ ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು.

ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯರು ಮಾತನಾಡಿ, ಬದುಕಿನ ಪುಸ್ತಕ ಹಳೆಯದಾದರೂ ನೆನಪಿನ ಪುಟಗಳು ಹೊಸದಾಗಿಯೇ ಇರುತ್ತವೆ. ಜಗತ್ತಿನ ಹಿಂದೆ ಸಾವಿರಾರು ಜನರು ಹೋಗುವುದು ಇತಿಹಾಸವಲ್ಲ. ಒಬ್ಬ ವ್ಯಕ್ತಿಯ ಹಿಂದೆ ಇಡೀ ಜಗತ್ತು ಬರುವುದು ನಿಜವಾದ ಇತಿಹಾಸ. ದಿಂಡದಹಳ್ಳಿ ಲಿಂ.ಶ್ರೀ ಶಿವಾನಂದ ಶ್ರೀಗಳವರ ಆದರ್ಶ ಗರಡಿಯಲ್ಲಿ ಪಳಗಿದ ತಾವೆಲ್ಲರೂ ನಿಜವಾದ ಪುಣ್ಯಶಾಲಿಗಳೆಂದರು.

## ನೂತನ ಪದಾಧಿಕಾರಿಗಳ ಪದಗ್ರಹಣ



■ ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 2024–2026ನೇ ಸಾಲಿನ NIMA ಗದಗ ಜಿಲ್ಲಾ ಮಹಿಳಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ನೂತನ ಸದಸ್ಯರ ಸ್ವಾಗತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದ ಅಧ್ಯಕ್ಷತೆಯನ್ನು NIMA ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ಜಯಕುಮಾರ ಬ್ಯಾಳಿ ವಹಿಸಿದ್ದರು. ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಡಾ. ಪಾರ್ವತಿ ರಣತೂರ ಕಾರ್ಯಕ್ರಮ ಉದ್ಘಾಟಿಸಿದರು. NIMA ಗದಗ ಜಿಲ್ಲಾ ಘಟಕದ ಗೌರವಾಧ್ಯಕ್ಷ ಡಾ. ಎಸ್.ಆರ್. ಹಿರೇಮಠ ನೂತನ ಸದಸ್ಯರಿಗೆ ಪ್ರಮಾಣವಚನ ಬೋಧಿಸಿದರು. ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಕೆ.ಬಿ. ಧನ್ನೂರ, NIMA ರಾಜ್ಯ ಘಟಕದ ಖಜಾಂಚಿ ಡಾ. ಶ್ರೀನಿವಾಸ ಹ್ಯಾಟಿ, NIMA UG, PG ವಿದ್ಯಾರ್ಥಿ ಘಟಕದ ಚೇರಮನ್, ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಐ.ಬಿ. ಕೊಟ್ಟೂರಶೆಟ್ಟಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ವೇದಿಕೆಯ ಮೇಲೆ NIMA ಗದಗ ಜಿಲ್ಲಾ ಘಟಕದ ಕಾರ್ಯದರ್ಶಿ ಡಾ. ಬಸವರಾಜ ಚನ್ನಪ್ಪಗೌಡರ, ಖಜಾಂಚಿ ಡಾ. ಗಿರೀಶ ಬಡಿಗೇರ, ಗದಗ ಜಿಲ್ಲಾ ಮಹಿಳಾ ಘಟಕದ ನಿಕಟಪೂರ್ವ ಅಧ್ಯಕ್ಷರಾದ ಡಾ. ರಾಜೇಶ್ವರಿ ಹಿರೇಮಠ, ಕಾರ್ಯದರ್ಶಿ ಹಸೀನಾ ಭಾವನಗರಿ ಅತಿಥಿಗಳಾಗಿ ಉಪಸ್ಥಿತರಿದ್ದರು.

ಅಧ್ಯಕ್ಷರಾಗಿ ಡಾ. ಸರೋಜಾ ರಾಮಣ್ಣವರ, ಕಾರ್ಯದರ್ಶಿಗಳಾಗಿ ಡಾ. ವಾಣಿ ಚವಡಿ ಹಾಗೂ ಖಜಾಂಚಿಗಳಾಗಿ ಡಾ. ಮಂಗಳಾ ಪಾಟೀಲ ಅಧಿಕಾರ ವಹಿಸಿಕೊಂಡರು. ಡಾ. ಆನಂದ ಕೆರಿಯವರ ಕಾರ್ಯಕ್ರಮವನ್ನು ನಿರೂಪಿಸಿದರು. ಡಾ. ವಾಣಿ ಚವಡಿ ವಂದಿಸಿದರು.



ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಂದರ್ಭದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಶಾಲಾ ಮೈದಾನವನ್ನು ಜಿ.ಪಂ ಸಿ.ಇ.ಓ ಭರತ್ ಎಸ್, ಡಿ.ಡಿ.ಪಿ.ಐ ಆರ್.ಎಸ್. ಬುರಡಿ, ಡಾ. ಬಸವರಾಜ ಧಾರವಾಡ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಫ್. ಶೆಟ್ಟೆಪ್ಪನವರ, ನಗರಸಭೆ ಸದಸ್ಯೆ ವಿದ್ಯಾ ಗಡಗಿ, ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳಾದ ಸರಸ್ವತಿ ಕನವಳ್ಳಿ, ರವಿಪ್ರಕಾಶ, ಎಂ.ಎಸ್. ಕಂಬಳಿ, ಶಿವಕುಮಾರ ಕುರಿ, ಅರವಟಗಿ, ಶಂಕರ ಹಡಗಲಿ, ಎಸ್.ಡಿ. ಪ್ರಭಯ್ಯನಮಠ, ಜೆ.ಬಿ. ಅಣ್ಣಿಗೇರಿ, ಬಿ.ಎಸ್. ಯರಗುಡಿ ವೀಕ್ಷಿಸಿದರು.

## ಬೆದರಿಕೆಗೆ ಒಳಗಾಗಿ ಶಿಕ್ಷಕ ಆತ್ಮಹತ್ಯೆ | ಆರ್‌ಟಿಐ ಕಾರ್ಯಕರ್ತನ ಬಂಧನ

■ ವಿಜಯಸಾಕ್ಷಿ ಸುದ್ದಿ, ಮಧ್ಯಪ್ರದೇಶ


ಮಧ್ಯಪ್ರದೇಶದ ದಾಮೋಹ್ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರೊಬ್ಬರ ಆತ್ಮಹತ್ಯೆಗೆ ಪ್ರಚೋದನೆ ನೀಡಿರುವ ಆರೋಪದ ಮೇಲೆ ಆರ್‌ಟಿಐ ಕಾರ್ಯಕರ್ತನನ್ನು ಬಂಧಿಸಲಾಗಿದೆ ಎಂದು ವರದಿಯಾಗಿದೆ. ಬೆದರಿಕೆಗೆ ಒಳಗಾಗಿ ಶಿಕ್ಷಕ ಮೇ 15 ರಂದು ದಾಮೋಹ್ ಜಿಲ್ಲೆಯ ಹಟ್ಟಾ ಪಟ್ಟಣದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕ ರಾಜೇಶ್ ತ್ರಿಪಾಠಿ ಅವರನ್ನು ಮಾನಸಿಕ ಕಿರುಕುಳ ನೀಡಿ ಬ್ಲ್ಯಾಕ್‌ಮೇಲ್ ಮಾಡಿದ ಆರೋಪದ ಮೇಲೆ ಮಧ್ಯವಯಸ್ಕ ಆರ್‌ಟಿಐ ಕಾರ್ಯಕರ್ತ ಜಿತೇಂದ್ರ ಭಟ್ ಅವರನ್ನು ಮೇ 26 ರಂದು ಬಂಧಿಸಲಾಗಿದೆ.

ಆರ್‌ಟಿಐ ಕಾರ್ಯಕರ್ತನ ಕಿರುಕುಳಕ್ಕೆ ಬೆದರಿ ತ್ರಿಪಾಠಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಲಾಗಿದೆ.

## ಜೂನ್ 2ರಂದು ವಿದ್ಯಾರ್ಥಿಗಳಿಗಾಗಿ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ರೋಣ

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪಾಸಾದ ವಿದ್ಯಾರ್ಥಿಗಳಿಗೆ ಜೂನ್ 2ರಂದು ರಾಜೀವಗಾಂಧಿ ಶಿಕ್ಷಣ ಸಂಸ್ಥೆಯಲ್ಲಿ 'ಮುಂದೇನು...' ಎಂಬುದರ ಕುರಿತು ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಲಾಗಿದ್ದು, ವಿದ್ಯಾರ್ಥಿಗಳು ಕಾರ್ಯಾಗಾರಕ್ಕೆ ಆಗಮಿಸಿ ಮಾಹಿತಿ ಪಡೆದುಕೊಳ್ಳಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.



ಅವರು ಬುಧವಾರ ರೋಣ ಪಟ್ಟಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಪಾಸಾದ ತಕ್ಷಣ ಅನೇಕ ವಿಷಯ ಕುರಿತು ಗೊಂದಲದಲ್ಲಿ ಬೀಳುತ್ತಾರೆ. ಹಿಗಾಗಬಾರದು ಎಂಬ ದೃಷ್ಟಿಯಿಂದ ಯಾವ ವಿದ್ಯಾರ್ಥಿ ಯಾವ ರಿತಿಯ ವಿಷಯಗಳನ್ನು ಆಯ್ಕೆ ಮಾಡಿಕೊಂಡು ಜೀವನದಲ್ಲಿ ಯಶಸ್ಸನ್ನು ಸಾಧಿಸಬಹುದು ಎಂಬುದನ್ನು ತಿಳಿಸುವುದೇ ಈ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ ಎಂದರು.

ಈ ಹಿಂದೆ ಸಂಸ್ಥೆಯಲ್ಲಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ಎರಡು ತಿಂಗಳ ಕಾಲ ಐಎಎಸ್ ಹಾಗೂ ಐಪಿಎಸ್ ಪರೀಕ್ಷೆಗಳನ್ನು ಎದುರಿಸುವುದು ಹೇಗೆ ಎಂಬುದರ ಕುರಿತು ಉಚಿತ ತರಬೇತಿಯನ್ನು ನೀಡಲಾಗಿತ್ತು. ಇದರ ಲಾಭವನ್ನು ನೂರಾರು ವಿದ್ಯಾರ್ಥಿಗಳು ಪಡೆದುಕೊಂಡಿದ್ದು ನಮಗೆ ಸಂತಸ ತಂದಿದೆ. ಈ ಬಾರಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮುಂದೇನು ಎಂಬ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ವಿದ್ಯಾರ್ಥಿಗಳು ಭಾಗಿಯಾಗಬೇಕು. ಈ ಕಾರ್ಯಾಗಾರಕ್ಕೆ ಧಾರವಾಡ ಜಿಲ್ಲಾಧಿಕಾರಿಗಳು ಸೇರಿದಂತೆ ಉನ್ನತ ಮಟ್ಟದ ಅಧಿಕಾರಿಗಳು, ನುರಿತ ತರಬೇತಿದಾರರು ಆಗಮಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಅಕ್ಷಯ ಪಾಟೀಲ, ಮುತ್ತಣ್ಣ ಸಂಗಳದ, ಯೂಸುಫ್ ಇಟಗಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಬಿಜೆಪಿಯವರು Sorry ಸಾವರ್ಕರ್‌ರನ್ನು ಅಕ್ಷರಶಃ ಪಾಲನೆ ಮಾಡುತ್ತಿದ್ದಾರೆ: ಸಚಿವ ಪ್ರಿಯಾಂಕ್ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿಯವರು Sorry ಸಾವರ್ಕರ್ ಅವರನ್ನು ಅಕ್ಷರಶಃ ಪಾಲನೆ ಮಾಡುತ್ತಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಬುಧವಾರ ಹೇಳಿದ್ದಾರೆ. ಪ್ರಜ್ಞೆ ಇಲ್ಲದೆ, ಮೆದುಳಿಗೂ ನಾಲಿಗೆಗೂ ಸಂಪರ್ಕವಿಲ್ಲದೆ ಮಾತನಾಡುವ ಬಿಜೆಪಿಯವರು ಕ್ಷಮೆ ಕೇಳುವುದರಲ್ಲಿ ಸಾವರ್ಕರ್ ಸಂಪ್ರದಾಯದಲ್ಲಿ ಮುಂದುವರಿಯುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ. ಬಿಜೆಪಿಯವರು ಖಂಡಿಡಿಥಿ ಸಾವರ್ಕರ್‌ರನ್ನು.

ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಬರೆದಿರುವ ಅವರು, "ಸೋಫಿಯಾ ಖುರೇಶಿ ಭಯೋತ್ಪಾದಕರ ಸಹೋದರಿ ಎಂದಿದ್ದ ವಿಜಯ್ ಶಾ ಕ್ಷಮೆ ಕೋರಿದರು.

## ನಾಗರಿಕರನ್ನು ತಟ್ಟಿದ ಪ್ರತಿಭಟನೆಯ ಬಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪೌರ ಕಾರ್ಮಿಕರ ಮುಷ್ಕರ ಎರಡನೇ ದಿನಕ್ಕೆ ಮುಂದುವರೆದಿದೆ. ಪೌರ ಕಾರ್ಮಿಕರು ಊರಿನ ಸ್ವಚ್ಛತೆಗೆ ಬಾರದೇ ಇರುವುದರಿಂದ ಪಟ್ಟಣದ ಮೂಲೆ ಮೂಲೆಗಳಲ್ಲಿ ಹಾಗೂ ಆಯಕಟ್ಟಿನ ಜಾಗೆಗಳಲ್ಲಿ ಕಸದ ರಾಶಿ ತುಂಬಿಕೊಂಡಿದ್ದು, ಎರಡೇ ದಿನಗಳಲ್ಲಿ ಪ್ರತಿಭಟನೆಯ ಬಿಸಿ ನಾಗರಿಕರಿಗೆ ಮುಟ್ಟಿದಂತಾಗಿದೆ.



ಮಂಗಳವಾರ ಮತ್ತು ಬುಧವಾರ ಪ್ರಮುಖ ಸ್ಥಳಗಳಲ್ಲಿ ಸ್ವಚ್ಛತೆ ಮಾಡದೆ ಇರುವದು ಹಾಗೂ ವಾರ್ಡ್‌ಗಳಲ್ಲಿ ಕಸ ಸಂಗ್ರಹಕ್ಕೆ ಬಾರದೇ ಇರುವದರಿಂದ ಸಾರ್ವಜನಿಕರು ಮನೆಯಲ್ಲಿನ ಕಸವನ್ನು ಚರಂಡಿಗೆ ಅಥವಾ ರಸ್ತೆ ಬದಿಯಲ್ಲಿಯೇ ಚೆಲ್ಲಿ ಕೈತೊಳೆದುಕೊಳ್ಳುತ್ತಿದ್ದಾರೆ. ಅದರಂತೆ ಪೇಟೆಯಲ್ಲಿ ಹಾಗೂ ಪ್ರಮುಖ ಆಯಕಟ್ಟಿನ ಜಾಗೆಗಳಲ್ಲಿ ಹೆಚ್ಚು ಸಂಗ್ರಹವಾಗುವ ಕಸ ರಸ್ತೆಯಲ್ಲಿಯೇ ದೂಡಿ ಅಥವಾ ಚರಂಡಿಗೆ ಹಾಕಿ ತಮ್ಮ ತಮ್ಮ ಅಂಗಡಿಗಳ ಮುಂದೆ ಸ್ವಚ್ಛಗೊಳಿಸುತ್ತಿದ್ದಾರೆ.

ಬುಧವಾರ ವ್ಯಾಪಾರಸ್ಥರೋರ್ವರು ಅಂಗಡಿ ಮುಂದೆ ಎಸೆದು ಹೋದ ಕಸದ ರಾಶಿಯನ್ನು ತಾವೇ ಸ್ವಚ್ಛಗೊಳಿಸಿದರು. ಓಣಿಗಳಲ್ಲಿ ಹಾಗೂ ಮುಖ್ಯ ಸ್ಥಳಗಳಲ್ಲಿ ಕಸದ ಪ್ರಮಾಣ ಎರಡೇ ದಿನಕ್ಕೆ ಬೆಟ್ಟದಷ್ಟಾಗಿದೆ. ಅಲ್ಲದೆ ಕುಡಿಯುವ ನೀರು ಸಹ ದೊರೆಯದಂತಾಗಿದೆ. ಸಾರ್ವಜನಿಕರು ಸರಕಾರದ ವಿರುದ್ಧ ತಮ್ಮ ಅಸಮಾಧಾನ ವ್ಯಕ್ತಪಡಿಸುತ್ತಿದ್ದು, ಕೂಡಲೇ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸುತ್ತಿದ್ದಾರೆ.

ಲಕ್ಷ್ಮೇಶ್ವರ ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದೆ. ಅದಕ್ಕೆ ತಕ್ಕಂತೆ ಪೌರ ಕಾರ್ಮಿಕರನ್ನು ನೇಮಕ ಮಾಡುವುದು ಸರ್ಕಾರದ ಜವಾಬ್ದಾರಿ. ಸದ್ಯ ಕಾರ್ಮಿಕರ ಸಂಖ್ಯೆ ಕಡಿಮೆ ಇರುವುದರಿಂದ 23 ವಾರ್ಡ್‌ಗಳಲ್ಲೂ ಸ್ವಚ್ಛತಾ ಕಾರ್ಯ ನಿರ್ವಹಿಸುವುದು ಇರುವ ಕಾರ್ಮಿಕರಿಗೆ ಹೊರೆ ಆಗುತ್ತಿದೆ. ಹಾಗಾಗಿ ಸರ್ಕಾರ ಹೆಚ್ಚಿನ ಪೌರ ಕಾರ್ಮಿಕರನ್ನು ನೇಮಕ ಮಾಡಬೇಕು ಮತ್ತು ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಖಾಯಂಗೊಳಿಸಬೇಕು ಎಂದು ನಿವೃತ್ತ ನೌಕರರ ಸಂಘದ ಸದಸ್ಯ ಪೂರ್ಣಾಜಿ ಖರಾಟೆ ಆಗ್ರಹಿಸಿದ್ದಾರೆ.

## ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಅಂಧತ್ವ ನಿವಾರಣಾ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಗದಗ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯಲ್ಲಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿದೆ.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಕೈಗೊಳ್ಳುವ 203ನೇ ಉಚಿತ ನೇತ್ರ ಚಿಕಿತ್ಸಾ ಶಿಬಿರವನ್ನು ಲಿಂಗೈಕ್ಯ ಮಹಾಂತಪ್ಪ ಬಸಪ್ಪ ಬಡ್ನಿ ಇವರ ಸ್ಮರಣಾರ್ಥ ಪುಷ್ಪಲತಾ ಮಹಾಂತಪ್ಪ ಬಡ್ನಿ ಹಾಗೂ ಮಕ್ಕಳು, ಗದಗ ಹಾಗೂ ಡಾ. ಶಿವಪುತ್ರಯ್ಯಾ ನಾಲತ್ವಾಡಮಠ ಹಾಗೂ ಗಿರಿಜಾ ನಾಲತ್ವಾಡಮಠ ಗದಗ ಇವರ ಪ್ರಾಯೋಜಕತ್ವದಲ್ಲಿ ಮೇ. 30ರಂದು ಸಾಯಂಕಾಲ 5 ಗಂಟೆಗೆ ತಪಾಸಣೆ ಹಾಗೂ ಮೇ. 31ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು.

ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ್ ಕಾರ್ಡಿನ ಝುರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು.

ಬ್ಲಡ್ ಪ್ರೆಶರ್ (B.P.) ಹಾಗೂ ಸಕ್ಕರೆ ಕಾಯಿಲೆ (Sugar) ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ. ಕಣ್ಣಿನ ಪೊರೆ ಬಂದ ರೋಗಿಗಳು ತಮ್ಮ ಹೆಸರನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ (ಸ್ಟೇಡಿಯಂ ಹತ್ತಿರ) ನೋಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷ ರೊ. ಇಂ. ಶ್ರೀಧರ ಎನ್.ಸುಲ್ತಾನಪೂರ, ಕಾರ್ಯದರ್ಶಿ ರೊ. ಇಂ. ಬಾಲಕೃಷ್ಣ ಕಾಮತ, ಐ.ಓ.ಎಲ್. ಚೇರಮನ್ ರೊ. ಡಾ.ಶೇಖರ ಡಿ.ಸಜ್ಜನರ ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದ್ದಾರೆ.

## ನಿಧನ

### ಸತ್ಯವ್ವ ಮೇಳೆನವರ



**ಬೆಟಗೇರಿ:** ಇಲ್ಲಿನ ಮಂಜುನಾಥ್ ನಗರದ ಸರಕಾರಿ ಹೆಣ್ಣು ಮಕ್ಕಳ ಶಾಲೆ ನಂ.4ರ ಹತ್ತಿರದ ನಿವಾಸಿ ಸತ್ಯವ್ವ ಲಕ್ಷ್ಮಣ್ ಮೇಳೆನವರ (80) ಇವರು ದಿ.27–05–2025ರ ಮಂಗಳವಾರ ರಾತ್ರಿ ನಿಧನರಾದರು. ಮೃತರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ ಜರುಗಿತು.

ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

**ಸಂತಾಪ:** ಸತ್ಯವ್ವ ಲಕ್ಷ್ಮಣ್ ಮೇಳೆನವರ ಅವರ ನಿಧನಕ್ಕೆ ಪ್ರವಾಸೋದ್ಯಮ ಇಲಾಖೆ ಮತ್ತು ಕಾನೂನು ಸಚಿವ ಎಚ್ ಕೆ ಪಾಟೀಲ, ಮಾಜಿ ಶಾಸಕ ಡಿ.ಆರ್ ಪಾಟೀಲ ಹಾಗೂ ಯುವ ಕಾಂಗ್ರೆಸ್‌ನ ಜಿಲ್ಲಾ ಅಧ್ಯಕ್ಷ ಕೃಷ್ಣಗೌಡ ಎಚ್ ಪಾಟೀಲ ಸೇರಿದಂತೆ ಅನೇಕ ಧುರೀಣರು ಸಂತಾಪ ಸೂಚಿಸಿದ್ದಾರೆ.

## ಆರ್ಥಿಕ ಸ್ಥಿತಿಗತಿಯ ಕ್ಷೇತ್ರಾಧ್ಯಯನ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಕಲಾ ವಿಭಾಗದ ಅಂತಿಮ ವರ್ಷದ ಅರ್ಥಶಾಸ್ತ್ರ ವಿಷಯದ ವಿದ್ಯಾರ್ಥಿಗಳಿಂದ ಬೀದಿಬದಿ ವ್ಯಾಪಾರಸ್ಥರ ಆರ್ಥಿಕ ಸ್ಥಿತಿಗತಿ ಕುರಿತು ಕ್ಷೇತ್ರಾಧ್ಯಯನ ಹಮ್ಮಿಕೊಳ್ಳಲಾಗಿತ್ತು.



ಈ ಕುರಿತು ಮಾಹಿತಿ ಸಂಗ್ರಹಿಸಲು ಗದುಗಿನ ಭೂಮರಡ್ಡಿ ವೃತ್ತದ ಹತ್ತಿರವಿರುವ ಬೀದಿಬದಿ ವ್ಯಾಪಾರಿಗಳನ್ನು ಭೇಟಿ ಮಾಡಿ ವಿವಿಧ ಹಳ್ಳಿಗಳ ಹಾಗೂ ಸ್ಥಳೀಯ ವಿವಿಧ ವ್ಯಾಪಾರಸ್ಥರಿಂದ ಇಂದಿನ ಅಧುನಿಕ ಯುಗದಲ್ಲಿ ಬೀದಿಬದಿ ವ್ಯಾಪಾರದೊಂದಿಗಿನ ಆರ್ಥಿಕ ಬದುಕಿನ ಸಂಬಂಧಗಳ ಕುರಿತು ಮಾಹಿತಿ ಪಡೆದುಕೊಂಡರು.

ಪ್ರಶ್ನಾವಳಿಗಳ ಮೂಲಕ ವ್ಯಾಪಾರಸ್ಥರೊಂದಿಗೆ ಚರ್ಚೆ ಮಾಡುತ್ತಾ, ವ್ಯಾಪಾರದ ಗುಣಮಟ್ಟ, ಸರಕು, ಆದಾಯ, ಅವರ ಸಮಸ್ಯೆಗಳು ಹಾಗೂ ಸರಕಾರದಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ಸಂಗ್ರಹಿಸಿದರು. ಈ ಕ್ಷೇತ್ರಾಧ್ಯಯನ ಕಾರ್ಯದಲ್ಲಿ ಪ್ರೊ. ವನಜಾಕ್ಷಿ ಸೂಡಿ ಹಾಗೂ ಪ್ರೊ. ಶ್ವೇತಾ ಸಿ ಭಾಗವಹಿಸಿದ್ದರು.

ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025–26/624

ದಿನಾಂಕ : 28–05–2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

**Standard Bid Document KW-1 & KW-2 & KG-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್–2000 ನಿಯಮದಂತೆ Standard Bid Document KW-1,2, & KG-1 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 16 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2023–24ನೇ ಸಾಲಿನ 5054 ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಯೋಜನೆ, 2023–24 ನೇ ಸಾಲಿನ ವಿಧಾನ ಪರಿಷತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ, 2022–23 ನೇ ಸಾಲಿನ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ, 2024–25ನೇ ಸಾಲಿನ 3054–80–196–1–01–300 ನಿರ್ವಹಣೆ ಅನುದಾನ, 2023–24 ನೇ ಸಾಲಿನ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆ ಯೋಜನೆ, 2023–24ನೇ ಸಾಲಿನ ವಿಶೇಷ ಆಕಾಂಕ್ಷಿ ಅಭಿವೃದ್ಧಿ ಯೋಜನೆ, 2024–25 ನೇ ಸಾಲಿನ ಐ.ಸಿ.ಡಿ.ಎಸ್. ಹಾಗೂ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಒಗ್ಗೂಡುವಿಕೆ ಅನುದಾನ, 2024–25 ನೇ ಸಾಲಿನ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ (ಹೆಚ್ಚುವರಿ ಕ್ರೀಯಾ ಯೋಜನೆ), 2021–22 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಶೌಚಾಲಯಗಳ ನಿರ್ಮಾಣಕ್ಕಾಗಿ ಇಲಾಖೆ ಅನುದಾನ ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

Indent Nos : 1) RDPR/2024-25/BD/WORK_INDENT : 14443, 14465, 14554, 14559, 15180, 15115, 12558, 8942 CALL-3, 8937/CALL-2, 14255/CALL-2, 5902/CALL-2, 12182/CALL-2, 15365, 8151/CALL-2, 9881, 15366

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.54** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **41.82** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ :– ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ–ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್–ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **28–05–2025** ರಿಂದ **13–06–2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **16–06–2025** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ–ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/– ಕಾರ್ಯನಿರ್ವಾಹಕ ಇಂಜಿನೀಯರರು, ಪಂ.ರಾಜ್. ಇಂಜಿನೀಯರಿಂಗ್ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/81/2025–26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka